ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 131
1–11–2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 131

## ಪೊಲೀಸ್ ಸೇರಿದಂತೆ ಯಾವುದೇ ಇಲಾಖೆಯಲ್ಲಿ ಲಂಚ ಪಡೆದರೂ ಸರ್ಕಾರ ಸಹಿಸಲ್ಲ: ಜಿ. ಪರಮೇಶ್ವರ

**ಬೆಂಗಳೂರು:** ಪೊಲೀಸ್ ಸೇರಿದಂತೆ ಯಾವುದೇ ಇಲಾಖೆಯಲ್ಲಿ ಲಂಚ ಪಡೆದರೂ ಸರ್ಕಾರ ಸಹಿಸುವುದಿಲ್ಲ. ಈ ಬಗ್ಗೆ ನಾವು ಗಂಭೀರವಾಗಿ ಪರಿಗಣಿಸುತ್ತೇವೆ ಮತ್ತು ಸೂಕ್ತ ಕ್ರಮ ಕೈಗೊಳ್ಳುತ್ತೇವೆ ಎಂದು ಕರ್ನಾಟಕ ಗೃಹ ಸಚಿವ ಜಿ ಪರಮೇಶ್ವರ ಶುಕ್ರವಾರ ಪ್ರತಿಪಾದಿಸಿದ್ದಾರೆ.

ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್‌ನ (ಬಿಪಿಸಿಎಲ್) ನಿವೃತ್ತ ಮುಖ್ಯ ಹಣಕಾಸು ಅಧಿಕಾರಿ ಶಿವಕುಮಾರ್ ಕೆ ಅವರು ಪ್ರತಿಯೊಂದು ಹಂತದಲ್ಲೂ ಹೇಗೆಲ್ಲ ಲಂಚಕ್ಕೆ ಬೇಡಿಕೆ ಇಡಲಾಯಿತು ಎನ್ನುವ ಆರೋಪಕ್ಕೆ ಅವರು ಪ್ರತಿಕ್ರಿಯಿಸಿದರು.

ನಾವು ಹಣ (ಲಂಚ) ಕೇಳುವ ಪ್ರಕರಣವನ್ನು ಬಹಳ ಗಂಭೀರವಾಗಿ ಪರಿಗಣಿಸುತ್ತೇವೆ. ಅದು ಪೊಲೀಸರಾಗಿರಲಿ ಅಥವಾ ಯಾವುದೇ ಸರ್ಕಾರಿ ಇಲಾಖೆಯಾಗಿರಲಿ. ನಾವು ಎಂದಿಗೂ ಲಂಚವನ್ನು ಯಾವುದೇ ರೀತಿಯಲ್ಲಿ ಪ್ರೋತ್ಸಾಹಿಸುವುದಿಲ್ಲ. ಮಾಹಿತಿ ಸಿಕ್ಕ ತಕ್ಷಣ ನಾವು ಕ್ರಮ ಕೈಗೊಳ್ಳುತ್ತೇವೆ, ಇಲಾಖಾ ವಿಚಾರಣೆಯನ್ನು ಪ್ರಾರಂಭಿಸುತ್ತೇವೆ ಮತ್ತು ಅವರನ್ನು ಅಮಾನತುಗೊಳಿಸುತ್ತೇವೆ.

# ವಾಜಪೇಯಿ ಇಂದಿರಾ ಗಾಂಧಿಯನ್ನು 'ದುರ್ಗೆ' ಅಂದಿದ್ರು: ಸಿಎಂ ಸಿದ್ದರಾಮಯ್ಯ

**ಬೆಂಗಳೂರು:** ಬಾಂಗ್ಲಾದೇಶದ ವಿಮೋಚನಾ ಸಂದರ್ಭದಲ್ಲಿ ವಾಜಪೇಯಿಯವರು ದುರ್ಗೆಯೆಂದು ಇಂದಿರಾ ಅವರನ್ನು ಸಂಭೋಧಿಸಿದ್ದರು ಎಂದು ಸಿಎಂ ಸಿದ್ದರಾಮಯ್ಯ ಶುಕ್ರವಾರ ಸ್ಮರಿಸಿದರು.

ಕಾಂಗ್ರೆಸ್ ಭವನದಲ್ಲಿ ಆಯೋಜಿಸಿದ್ದ ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಪುಣ್ಯಸ್ಮರಣೆ ಹಾಗೂ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಿದ್ದರಾಮಯ್ಯ, ಇಂದಿರಾ ಗಾಂಧಿಯವರು ದೇಶಕ್ಕಾಗಿ ಹುತಾತ್ಮರಾದರು. ಆದರೆ ಅವರ ಆದರ್ಶಗಳು ನಮ್ಮೊಂದಿಗೆ ಇವೆ. ಅವುಗಳನ್ನು ಪಾಲಿಸುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದರು.

ಪಾಕಿಸ್ತಾನವನ್ನು ಸದೆಬಡೆದು ಬಾಂಗ್ಲಾದೇಶವನ್ನು ವಿಮೋಚನೆಗೊಳಿಸಿದ ಈ ಯುದ್ಧದಲ್ಲಿ ಸುಮಾರು 90 ಸಾವಿರ ಪಾಕಿಸ್ತಾನ ಸೈನಿಕರು ಸೆರೆಯಾಗಿದ್ದರು. ಇಂದಿರಾ ಗಾಂಧಿಯವರ ದಿಟ್ಟತನಕ್ಕೆ ಅವರನ್ನು ಉಕ್ಕಿನ ಮಹಿಳೆ ಎಂದು ಕರೆಯಲಾಗುತ್ತಿತ್ತು. ವಾಜಪೇಯಿಯವರು ದುರ್ಗೆಯೆಂದು ಇಂದಿರಾ ಅವರನ್ನು ಸಂಭೋಧಿಸಿದ್ದರು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

**ಇಂದಿರಾ ಗಾಂಧಿ ಧೀಮಂತ ನಾಯಕಿ:** ದೀರ್ಘ ಕಾಲದವರೆಗೆ ದೇಶವನ್ನಾಳಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಅವರ ಅವಧಿಯಲ್ಲಿ ಬಡತನ ನಿರ್ಮೂಲನೆಗೊಳಿಸುವ 'ಗರೀಬಿ ಹಟಾವೋ' ಘೋಷಣೆಯನ್ನು ಮಾಡಿದ್ದರು. ಭಾರತದಲ್ಲಿ ಅಸಮಾನತೆಯಿದೆ. ಇಂದಿರಾಗಾಂಧಿಯವರ ಕಾಲಘಟ್ಟದಲ್ಲಿ ಬಡವರ ಸಂಖ್ಯೆ ಹೆಚ್ಚಿತ್ತು. ಆದ್ದರಿಂದ ಬಡತನ ಹೋಗಲಾಡಿಸಲು 20 ಅಂಶಗಳ ಕಾರ್ಯಕ್ರಮವನ್ನು ಅವರು ಜಾರಿಗೆ ತಂದರು ಎಂದು ತಿಳಿಸಿದರು.



ನಮ್ಮ ಸಂವಿಧಾನ ಎಲ್ಲರಿಗೂ ಬದುಕುವ ಹಕ್ಕನ್ನು ನೀಡಿದೆ. ಜಾತಿವ್ಯವಸ್ಥೆಯಿಂದ ಅಸಮಾನತೆ ಹೆಚ್ಚಿದ್ದು, ಬಹುಸಂಖ್ಯಾತ ಜನರು, ಮಹಿಳೆಯರು ಅಕ್ಷರ ಸಂಸ್ಕೃತಿಯಿಂದ ವಂಚಿತರಾಗಿದ್ದಾರೆ. ಚತುರ್ವರ್ಣ ವ್ಯವಸ್ಥೆಯಲ್ಲಿ ಮೊದಲ ಮೂರು ವರ್ಗಗಳಿಗೆ ಎಲ್ಲ ಅವಕಾಶಗಳು ಸಿಗುತ್ತಿತ್ತು. ಆದರೆ ಮೇಲ್ವರ್ಗದ ಹೆಣ್ಣುಮಕ್ಕಳೂ ಸಹ ಶಿಕ್ಷಣದಿಂದ ವಂಚಿತರಾಗಿದ್ದರು. ಸಮಸಮಾಜ ಪರಿಕಲ್ಪನೆಗೆ ಜೀವತುಂಬಿದ್ದ ಬಸವಣ್ಣನವರು ಸಾಮಾಜಿಕ ಕ್ರಾಂತಿಗೆ ನಾಂದಿ ಹಾಡಿದರು. ನಮ್ಮ ಸರ್ಕಾರ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದೆ. ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಬಸವಣ್ಣವರ ಫೋಟೋವನ್ನು ಅಳವಡಿಸಲು ಆದೇಶ ನೀಡಿದೆ ಎಂದು ಹೇಳಿದರು.

ಬಿಜೆಪಿಯವರ ಢೋಂಗಿತನ: ವಲ್ಲಭಭಾಯಿ ಪಟೇಲರು ದೇಶದ ಉಪ ಪ್ರಧಾನಿಗಳಾಗಿದ್ದರಲ್ಲದೇ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿದವರಲ್ಲಿ ಅಗ್ರಗಣ್ಯರು. ಸ್ವಾತಂತ್ರ್ಯ ಗಳಿಸಿದಾಗ ದೇಶದಲ್ಲಿ 562 ಸಂಸ್ಥಾನಗಳನ್ನು ಭಾರತಕ್ಕೆ ಸೇರಿಸಲು ಆಗ ಗೃಹ ಸಚಿವರಾಗಿದ್ದ ಪಟೇಲರ ಪ್ರಯತ್ನವೇ ಕಾರಣ. ಅದಕ್ಕಾಗಿಯೇ ಅವರನ್ನು ಉಕ್ಕಿನ ಮನುಷ್ಯ ಎಂದು ಕರೆಯುತ್ತೇವೆ. ಬಿಜೆಪಿಯವರು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಿಯೇ ಇಲ್ಲ. ಸಾವರ್ಕರ್, ಗೋಲ್ವಾಲ್ಕರ್ ಆಗಲಿ ಸ್ವಾತಂತ್ರ್ಯಕ್ಕಾಗಿ ಹೋರಾಡಿಲ್ಲ. ಈಗ ಬಿಜೆಪಿಯವರು ಮಹಾನ್ ದೇಶಭಕ್ತರಂತೆ ಮಾತನಾಡುತ್ತಾರೆ. ಇದು ಬಿಜೆಪಿಯವರ ಢೋಂಗಿತನ ಎಂದು ಟೀಕಿಸಿದರು.

# "ನಿಮ್ಮ ಹಣ ನಿಮ್ಮ ಹಕ್ಕು" ಅಭಿಯಾನಕ್ಕೆ ಚಾಲನೆ

**ದಾವಣಗೆರೆ :** ಜಿಲ್ಲೆಯ ಎಲ್ಲಾ ಸರ್ಕಾರಿ ಬ್ಯಾಂಕುಗಳಲ್ಲಿ ಠೇವಣಿ ಅಥವಾ ಇತರೆ ಕಾರಣದಿಂದ ಬಾಕಿ ಉಳಿದು, ಗ್ರಾಹಕರು ಹಣ ಹಿಂಪಡೆಯದೆ ಇರುವ ನಿಮ್ಮ ಹಣ ನಿಮ್ಮ ಹಕ್ಕು"* ಪ್ರಚಾರ ಅಭಿಯಾನಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ದಾವಣಗೆರೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ಚಾಲನೆ ನೀಡಿದರು.



ಮಹಾವೀರ ಮ. ಕರಣ್ಣವರ್ ಮಾತನಾಡಿ, ಜಿಲ್ಲೆಯಲ್ಲಿನ ಎಸ್‌ಬಿಐ, ಕೆನಾರಾ ಬ್ಯಾಂಕ್, ಕರ್ನಾಟಕ ಬ್ಯಾಂಕ್, ಕೆಜಿಬಿ, ಇಂಡಿಯನ್ ಬ್ಯಾಂಕ್ ಸೇರಿದಂತೆ ಒಟ್ಟು 23 ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ 2,67,508 ಖಾತೆಗಳಲ್ಲಿ ಸುಮಾರು 61.69 ಕೋಟಿಗಿಂತ ಹೆಚ್ಚಿನ ಹಣ ಡೋರ್ ಮ್ಯಾಟ್ ಅಕೌಂಟ್‌ನಲ್ಲಿ ಸೇರ್ಪಡೆಯಾಗಿದೆ. ಈ ಮೊತ್ತವು ಸಂಬಂಧಪಟ್ಟ ಖಾತೆದಾರರಿಗೆ ಅಥವಾ ಅವರ ವಾಸುದಾರರಿಗೆ ಸೇರಬೇಕಾಗಿದೆ ಎಂದು ತಿಳಿಸಿದರು. ಇದು ಸರ್ಕಾರದ ಮತ್ತು ಬ್ಯಾಂಕುಗಳ ಅತ್ಯುತ್ತಮ ಕೆಲಸವಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಸಲಹೆ ನೀಡಿದರು.

ಲೀಡ್ ಬ್ಯಾಂಕಿನ ಮ್ಯಾನೇಜರ್ ಪಡದಯ್ಯ ಹಿರೇಮಠ್‌ರವರು ಮಾತನಾಡಿ, ಸಾರ್ವಜನಿಕರ ಖಾತೆಗಳಿಗೆ ಸಂಬಂಧಿಸಿದಂತೆ ಹಲವು ಬ್ಯಾಂಕುಗಳಲ್ಲಿ ಪಾವತಿಯಾಗದೆ ಸುಮಾರು 10 ವರ್ಷಕ್ಕಿಂತ ಹೆಚ್ಚಿನ ಅವಧಿಗೆ ಬಾಕಿ ಬಿದ್ದು ಅಲ್ಲಿಯೇ ಉಳಿದಿರುವ ಹಣವನ್ನು ಗ್ರಾಹಕರಿಗೆ ಹಿಂದಿರುಗಿಸುವುದೇ ಕಾರ್ಯಕ್ರಮದ ಉದ್ದೇಶ. ಈ ಹಣವನ್ನು ಹಿಂಪಡೆಯಲು ಕೆ ವೈ ಸಿ (KYC) ದಾಖಲೆ ಕೊಟ್ಟರೆ ಸಾಕು. ಅದಕ್ಕೆ ಸಂಬಂಧಿಸಿದ ಬ್ಯಾಂಕ್ ಸಿಬ್ಬಂದಿಯವರು ಕೂಡ ಸಹಕಾರ ನೀಡಲಿದ್ದಾರೆ ಎಂದು ಮಾಹಿತಿ ನೀಡಿದರು. ಅಷ್ಟೇ ಅಲ್ಲದೆ ಆನ್ಲೈನ್ ಮೂಲಕವೂ ಸಹ ಹಣ ಹಿಂಪಡೆಯಬಹುದು ಎಂದು ಮಾಹಿತಿ ಎಂದರು.

ಇದೇ ಸಂದರ್ಭದಲ್ಲಿ ವಿವಿಧ ವಿನ್ಯಾಸದ ಬಿತ್ತಿ ಪತ್ರಗಳನ್ನು ಮತ್ತು ಸಾರ್ವಜನಿಕ ಮಾಹಿತಿ ಪತ್ರಗಳನ್ನು ಬಿಡುಗಡೆ ಮಾಡಲಾಯಿತು.

# ರಾಜ್ಯ ಮಹಿಳಾ ನಿಲಯದಲ್ಲಿ ವಿವಾಹ ಮಹೋತ್ಸವ



**ದಾವಣಗೆರೆ:** ರಾಜ್ಯ ಮಹಿಳಾ ನಿಲಯದಲ್ಲಿ ಶುಕ್ರವಾರ ಮೂವರು ಮಹಿಳಾ ನಿವಾಸಿಗಳಾದ ಶಾಲಿನಿ 28 ವರ್ಷ, ರಕ್ಷಿತಾ.ಟಿ 21 ವರ್ಷ, ಮತ್ತು 24 ವರ್ಷದ ರುಚಿತ.ಎ ಸೇರಿದಂತೆ ಮೂವರು ಯುವತಿಯರಿಗೆ ಬದುಕು ಕಟ್ಟಿಕೊಡಲು ಮೂವರು ಯುವಕರು ಮುಂದಾಗಿದ್ದು, ಮೂವರು ನೂತನ ವಧು, ವರರ ವಿವಾಹ ಮಹೋತ್ಸವ ಸಮಾರಂಭಕ್ಕೆ ಮಹಿಳಾ ನಿಲಯ ಸಾಕ್ಷಿಯಾಯಿತು.

ವಿವಾಹಕ್ಕಾಗಿ ಶ್ರೀ ರಾಮನಗರದಲ್ಲಿರುವ ಮಹಿಳಾ ನಿಲಯವು ತಳಿರು ತೋರಣದಿಂದ ರಂಗೋಲಿಯಿಂದ ಕಂಗೊಳಿಸುತ್ತಿತ್ತು. ನಿಲಯದ ತುಂಬೆಲ್ಲ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ಮಹಿಳಾ ನಿಲಯದ ನಿವಾಸಿಗಳು, ಅವರ ಬಂಧುಗಳು ರೇಷ್ಮೆ ಸೀರೆಯುಟ್ಟು ಮದುವೆಯ ಮನೆ ತುಂಬ ತರಾತುರಿಯಲ್ಲಿ ಓಡಾಡುತ್ತಾ ಸಂಭ್ರಮದಿಂದ ಮದುವೆಯಾಚರಣೆಯ ಸಿದ್ದತೆಯಲ್ಲಿ ತೊಡಗಿದ್ದ ದೃಶ್ಯ ಕಂಡು ಬಂದಿತು.

ಮದುವೆ ಚಪ್ಪರ, ಸ್ವಾಗತ ದ್ವಾರ ನಿರ್ಮಿಸಲಾಗಿತ್ತು. ಅಮಂತ್ರಿತರಿಗೆ ಗುಲಾಬಿ ಹೂ ನೀಡುವುದರೊಂದಿಗೆ ಸ್ವಾಗತಿಸಲಾಯಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ರಾಜಾನಾಯ್ಕ ಅವರ ಸಂಪೂರ್ಣ ಮೇಲುಸ್ತುವಾರಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಘಟಕಗಳು, ಮಹಿಳಾ ನಿಲಯದ ಅಧಿಕಾರಿ, ಸಿಬ್ಬಂದಿಗಳು ತಮ್ಮ ಸ್ವಂತ ಮಕ್ಕಳ ಮದುವೆ ಸಮಾರಂಭವೆಂಬಂತೆ ಅಚ್ಚುಕಟ್ಟಾಗಿ ಮತ್ತು ಸಂಭ್ರಮದಿಂದ ಈ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿದರು.

ಶ್ರೀ ರಾಮನಗರದ ಇಂಡಸ್ಟ್ರಿಯಲ್ ಏರಿಯಾದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ರಾಜ್ಯ ಮಹಿಳಾ ನಿಲಯದ ನಿವಾಸಿಗಳಾದ ಶಾಲಿನಿ ಇವರೊಂದಿಗೆ ನಾಗರಾಜ, ಇಬ್ಬರಿಬ್ಬರೂ ಶ್ರವಣ ಹಾಗೂ ವಾಕ್ ದೋಷವುಳ್ಳವರಾಗಿರುತ್ತಾರೆ. ರಕ್ಷಿತಾ.ಟಿ ಇವರೊಂದಿಗೆ ಬಸವರಾಜ್, ರುಚಿತ ಇವರೊಂದಿಗೆ ಪ್ರವೀಣ ಇವರ ವಿವಾಹ ಮಹೋತ್ಸವವು ಅ.31 ರಂದು ಬೆಳಿಗ್ಗೆ 7.30 ರಿಂದ 10.30 ರವರೆಗೆ ದಾವಣಗೆರೆಯ ರಾಜ್ಯ ಮಹಿಳಾ ನಿಲಯದಲ್ಲಿ ಸಂಭ್ರಮಾಚರಣೆಯಿಂದ ನೆರವೇರಿತು.

ಜಿಲ್ಲಾಡಳಿತ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದಲ್ಲಿ ಇಂದು ಮಹಿಳಾ ನಿಲಯದ ಶಾಲಿನಿ, ರಕ್ಷಿತಾ.ಟಿ, ಮತ್ತು ರುಚಿತ.ಎ ಎಂಬ ನಮ್ಮ ಮೂವರು ಹೆಣ್ಣು ಮಕ್ಕಳಿಗೆ ಧಾರೆ ಎರೆದು ಕೊಟ್ಟಿರುವುದು ಬಹಳಷ್ಟು ಅರ್ಥ ಪೂರ್ಣವಾದ ಕಾರ್ಯ. ಶಾಶ್ವತವಾಗಿ ನೆನಪಿಟ್ಟುಕೊಳ್ಳುವ ಸಂಭ್ರಮವಾಗಿದೆ ಎಂದರು.

ರಾಜ್ಯ ಮಹಿಳಾ ನಿಲಯ ಸಂಸ್ಥೆಯಲ್ಲಿ ಈಗ ಹಾಲಿ 45 ನಿವಾಸಿಗಳು ಇದ್ದು, ಇಲ್ಲಿಯವರೆಗೆ ಸಂಸ್ಥೆಯಲ್ಲಿ 46 ವಿವಾಹವನ್ನು ಇಲಾಖೆಯ ನಿಯಮಾನುಸಾರ ವರದಿ ಪಡೆದುಕೊಂಡಿರುತ್ತಾರೆ. ಈ ಹಿಂದೆ ನಡೆದ ವಿವಾಹ ಮಹಿಳೆಯರು ತಮ್ಮ ಸಂಸಾರದೊಂದಿಗೆ ಸುಖ ಜೀವನವನ್ನು ನಡೆಸುತ್ತಿದ್ದಾರೆ.

ಈ ಶುಭ ಸಂದರ್ಭದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ವೇಲಾ ಡಿ.ಕೆ, ನ್ಯಾಯಾಧೀಶರು ಹಾಗೂ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ, ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ್ ವಿಠ್ಠಲರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

## ವಿಧವೆಗೆ ಲೈಂಗಿಕ ಕಿರುಕುಳ: ಮಾಜಿ ಕುಲಸಚಿವ ಮೈಲಾರಪ್ಪ ಬಂಧನ

**ಬೆಂಗಳೂರು :** ವಿಧವೆಗೆ ಲೈಂಗಿಕ ಕಿರುಕುಳ ನೀಡಿದ ಪ್ರಕರಣದಲ್ಲಿ ಬೆಂಗಳೂರಿನ ವಿಶ್ವವಿದ್ಯಾಲಯದ ಮಾಜಿ ಕುಲಸಚಿವ ಪ್ರೊ. ಬಿ.ಸಿ ಮೈಲಾರಪ್ಪನನ್ನು ಬಸವೇಶ್ವರನಗರದ ಪೊಲೀಸರು ಬಂಧಿಸಿದ್ದಾರೆ. ಸಂತ್ರಸ್ತೆ 2022ರ ನವೆಂಬರ್ ನಲ್ಲಿ ಅಂದಿನ ಬೆಂಗಳೂರು ವಿ.ವಿ ನಿರ್ದೇಶಕರಾದ ಪ್ರೊ. ಬಿ.ಸಿ ಮೈಲಾರಪ್ಪ ನಡೆಸುತ್ತಿದ್ದ ಕರ್ನಾಟಕ ರಾಜ್ಯ ಹರಿಜನ ಸೇವಕ ಸಂಘದಲ್ಲಿ ಕೆಲಸಕ್ಕೆ ಸೇರಿದ್ದರು. ಕೆಲಸಕ್ಕೆ ಸೇರಿದ ಮೇಲೆ ಮೈಲಾರಪ್ಪ ಮಹಿಳೆಗೆ ಲೈಂಗಿಕ ಸಂಪರ್ಕ ಬೆಳೆಸುವಂತೆ ಒತ್ತಡ ಏರುತ್ತಿದ್ದರು. ಹೀಗಾಗಿ ಮಹಿಳೆ ಪೊಲೀಸರಿಗೆ ದೂರು ನೀಡಿದ್ದಳು.

## ಆನೆ ದಾಳಿ: ಇಬ್ಬರು ಬಲಿ, ತಹಶೀಲ್ದಾರ್ ಜೀಪ್ ತಡೆ ಗ್ರಾಮಸ್ಥರ ಪ್ರತಿಭಟನೆ

ಆನೆ ದಾಳಿಗೆ ಇಬ್ಬರು ಸಹೋದರರು ಬಲಿಯಾಗಿರುವ ಘಟನೆ ಶೃಂಗೇರಿ ತಾಲೂಕಿನಲ್ಲಿ ಕೆರೆಕಟ್ಟೆ ಸಮೀಪದ ಕೆರೆಮನೆ ಗ್ರಾಮದಲ್ಲಿ ಇಂದು ಬೆಳಗ್ಗೆ ನಡೆದಿದೆ. ಹರೀಶ್ ಹಾಗೂ ಉಮೇಶ್ ಆನೆ ದಾಳಿಗೆ ಪ್ರಾಣ ಕಳೆದುಕೊಂಡವರು. ಸುದ್ದಿ ತಿಳಿದು ಘಟನಾ ಸ್ಥಳಕ್ಕೆ ತೆರಳುತ್ತಿದ್ದ ತಹಶೀಲ್ದಾರ್ ಅವರಿದ್ದ ಜೀಪನ್ನು ತಡೆದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದರು. ಕೊಟ್ಟಿಗೆಗೆ ಸೊಪ್ಪು ತರಲು ಹೋಗಿದ್ದ ಸಂದರ್ಭದಲ್ಲಿ ಮೊದಲು ವ್ಯಕ್ತಿಯೊಬ್ಬನ ಮೇಲೆ ಆನೆ ದಾಳಿ ಮಾಡಿದೆ. ಮನೆಯಿಂದ ಸ್ವಲ್ಪ ದೂರದಲ್ಲಿ ನಾಯಿ ಏಕೆ ಬೊಗಳುತ್ತಿದೆ ಎಂದು ನೋಡಲು ಹೋಗಿದ್ದ ಮತ್ತೊಬ್ಬ ವ್ಯಕ್ತಿಯ ಮೇಲೂ ಆನೆ ದಾಳಿ ಮಾಡಿ ಕೊಂದು ಹಾಕಿದೆ.

## ಇಂದು ಅಂದನೂರು ಮನೆತನದ ಹಿರಿ–ಕಿರಿಯರ ಸಮಾಗಮ

**ದಾವಣಗೆರೆ:** ಅಂದನೂರು ಬಳಗದ ವತಿಯಿಂದ ಅಂದನೂರು ಮನೆತನದ ಹಿರಿ ಕಿರಿಯರ ಸಮಾಗಮ ಕಾರ್ಯಕ್ರಮವನ್ನು ನ.1ರ ಇಂದು ಬೆಳಗ್ಗೆ 10.30ಕ್ಕೆ ನಗರದ ತ್ರಿಶೂಲ್ ಕಲಾಭವನದಲ್ಲಿ ಏರ್ಪಡಿಸಲಾಗಿದೆ.

ಹರಿಹರದ ವೀರಶೈವ ಪಂಚಮಸಾಲಿ ಪೀಠದ ಶ್ರೀ ವಚನಾನಂದ ಸ್ವಾಮೀಜಿ ಅವರ ದಿವ್ಯ ಸಾನಿಧ್ಯದಲ್ಲಿ, ಅಂದನೂರು ಬಳಗದ ಅಧ್ಯಕ್ಷ ಅಂದನೂರು ಬಾಬಣ್ಣ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠ ಟ್ರಸ್ಟ್ ಧರ್ಮದರ್ಶಿ ಬಿ.ಸಿ ಉಮಾಪತಿ ಮುಖ್ಯಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕಾರ್ಯಕ್ರಮದಲ್ಲಿ 70 ವರ್ಷ ಮೇಲ್ಪಟ್ಟ ಹಿರಿಯ ಸದಸ್ಯರಿಗೆ ಗೌರವಾರ್ಪಣೆ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಸಾಧಕ ಸದಸ್ಯರಿಗೆ ಅಭಿನಂದನೆ ಹಾಗೂ ಸದಸ್ಯರಿಗೆ ವಿವಿಧ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿದೆ.

# ದೇವರ ಮೇಲೆ ಶ್ರದ್ಧೆ ನಂಬಿಕೆ ಇದ್ದರೆ ಭಗವಂತ ಎಲ್ಲ ದಯಪಾಲಿಸುತ್ತಾನೆ : ಮಾಡಾಳ್ ವಿರೂಪಾಕ್ಷಪ್ಪ

**ಚನ್ನಗಿರಿ :** ದೇವರ ಮೇಲೆ ಶ್ರದ್ಧೆ ನಂಬಿಕೆ ಇದ್ದರೆ ಭಗವಂತ ಎಲ್ಲವನ್ನು ದಯಪಾಲಿಸುತ್ತಾನೆ ದೇಗುಲಗಳಲ್ಲಿ ಸ್ವಚ್ಛತೆಯನ್ನು ಕಾಪಾಡಬೇಕು ಎಂದು ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಹೇಳಿದರು.



ಶುಕ್ರವಾರ ಪಟ್ಟಣದ ಮೇದಾರ ಬೀದಿಯಲ್ಲಿ ನವೀಕರಣಗೊಳಿಸಲಾದ ಶ್ರೀ ಕುಕ್ವಾಡೇಶ್ವರಿ ದೇಗುಲದ ಪ್ರವೇಶೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಚನ್ನಗಿರಿ ಪಟ್ಟಣದಲ್ಲಿ ಇರುವಂತಹ ಮೇದಾರ ಸಮಾಜವು ಇತರೇ ಸಮಾಜಗಳೊಂದಿಗೆ ಹೊಂದುಕೊಂಡು ಹೋಗುವಂತಹ ಸಮಾಜವಾಗಿದ್ದು ಈ ಸಮಾಜದ ಗುರುಗಳು ಬಸವಣ್ಣನವರ ಸಮಕಾಲೀನರು ಆಗಿದ್ದರು. ಅಂದಿನ ಕಾಲದಲ್ಲಿ ಬಸವಣ್ಣನವರು ಸಮ ಸಮಾಜದ ನಿರ್ಮಾಣದ ಕನಸನ್ನು ಹೊತ್ತು ಶರಣರ ವಿಚಾರಧಾರೆಗಳನ್ನು ಸಮಾಜಕ್ಕೆ ಅರ್ಪಣೆ ಮಾಡಿದ್ದರು. ಈ ಹಿಂದೆ ನನ್ನ ಆವದಿಯಲ್ಲಿ ದೇಗುಲದ ನವೀಕರಣಕ್ಕಾಗಿ ಅನುದಾನವನ್ನು ನೀಡಿದ್ದು ಅರ್ಧದಷ್ಟು ಮಾತ್ರ ಹಣವನ್ನು ನೀಡಲಾಗಿದೆ. ಇಂದಿನ ಶಾಸಕರು ಉಳಿದಂತಹ ಹಣವನ್ನು ತಕ್ಷಣವೇ ನೀಡುವ ಮೂಲಕ ಸಮಾಜದ ಜೊತೆ ನಿಲ್ಲಬೇಕು ಎಂದರು.

ಕಾಂಗ್ರೆಸ್ ಮುಖಂಡ ಕೆ.ಪಿ.ಸಿ.ಸಿ. ವಕ್ತಾರ ಹೊದಿಗೆರೆ ರಮೇಶ್ ಮಾತನಾಡಿ ಮೇದಾರ ಸಮಾಜದ ಜೊತೆ ಅನನ್ಯವಾದ ಪ್ರೀತಿ ವಿಶ್ವಾಸವನ್ನು ಬೆಳೆಸಿಕೊಂಡಿದ್ದು ಪುಟ್ಟಿಹೆಣೆಯವ ವೃತ್ತಿಯನ್ನು ನಿರಂತರವಾಗಿ ಮಾಡಿಕೊಂಡು ಬಂದಿದ್ದಾರೆ. ಇಂತಹ ಸಮಾಜಗಳು ಮುಖ್ಯವಾಹಿನಿಗೆ ಬರಬೇಕಾದರೆ ಮೊದಲು ಶೈಕ್ಷಣಿಕವಾಗಿ ಅಭಿವೃದ್ಧಿಯನ್ನು ಹೊಂದಬೇಕು. ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಅಸಮತೋಲನತೆ ಸಮಾಜದಲ್ಲಿ ಇದ್ದು ಮುಖ್ಯವಾಹಿನಿಗೆ ಬರುವಂತಹ ಪ್ರಯತ್ನ ಮಾಡಬೇಕು. ಸ್ವಾವಲಂಬಿಗಳು ಆಗಬೇಕು. ನಮ್ಮ ಮುಂದಿರುವ ಸವಾಲುಗಳು ಏನು ಎನ್ನುವುದರ ಬಗ್ಗೆ ಯೋಚಿಸಬೇಕು. ನಮಗೆ ದೇವಾಲಯಗಳ ಆಗತ್ಯವಿದೆ. ಆದರೆ ಮೂಡನಂಬಿಕೆಗಳಿಂದ ಹೊರಬರಬೇಕು ಎಂದರು. ಚನ್ನಗಿರಿ ತಾಲೂಕಿನ ಮಾಜಿ ಶಾಸಕರಾದ ಮಾಡಾಳ್ ವಿರೂಪಾಕ್ಷಪ್ಪನವರು ಸಾಕಷ್ಟು ದೇಗುಲಗಳನ್ನು ನಿರ್ಮಾಣ ಮಾಡಿದ್ದು ಯಾವುದೇ ಸಮುದಾಯಗಳ ದೇಗುಲಗಳು ಬಾಕಿ ಉಳಿದಿಲ್ಲ. ಉಳಿದಂತೆ ಸಮುದಾಯಗಳು ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಒತ್ತನ್ನು ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಚನ್ನಗಿರಿ ಹಾಲಸ್ವಾಮಿ ವಿರಕ್ತ ಮಠದ ಡಾ.ಬಸವಜಯಚಂದ್ರಸ್ವಾಮಿಗಳು, ಚನ್ನಗಿರಿ ಹಿರೇಮಠದ ಕೇದಾರಲಿಂಗ ಶಿವಶಾಂತವೀರಸ್ವಾಮಿಗಳು ಸಾನಿಧ್ಯ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಚನ್ನಗಿರಿ ಮರಾಠ ಸಮಾಜದ ಅಧ್ಯಕ್ಷ ಎಂ.ಬಿ.ಶಿವಾಜಿರಾವ್, ವೀರಶೈವ ಲಿಂಗಾಯಿತ ಸಮಾಜದ ಅಧ್ಯಕ್ಷ ರಾಜಶೇಖರಯ್ಯ, ಮುಸ್ಲಿಂ ಸಮಾಜದ ಮುಖಂಡ ಅಮಾನುಲ್ಲ, ವಿಶ್ವಕರ್ಮ ಸಮಾಜದ ಅಧ್ಯಕ್ಷ ತಿಪ್ಪೇಸ್ವಾಮಿ, ಮೇದಾರ ಸಮಾಜದ ಅಧ್ಯಕ್ಷ ಕೆಂಚಪ್ಪ, ವಿಶ್ವಹಿಂದೂ ಪರಿಷತ್‌ನ ಸಂಚಾಲಕ ಮಂಜುನಾಥ್ ಇತರರು ಹಾಜರಿದ್ದರು.

# ರಸ್ತೆ ಗುಂಡಿ ಮುಚ್ಚದಿದ್ದರೆ ಅಧಿಕಾರಿಗಳ ತಲೆ ತಂಡ: ಆಯುಕ್ತರ ಖಡಕ್ ಎಚ್ಚರಿಕೆ

## ರಸ್ತೆ ಅಪೂರ್ಣ, ದೂರು ಹಿನ್ನಲೆ ಹಳೇ ಕುಂದುವಾಡಕ್ಕೆ ಆಯುಕ್ತರ ಭೇಟಿ

**ದಾವಣಗೆರೆ:** ನಗರದ ಹಳೇ ಕುಂದುವಾಡ ಮುಖ್ಯರಸ್ತೆ ಅಪೂರ್ಣ ವಿಚಾರ ದೂರು ಬಂದ ಹಿನ್ನಲೆ ಮಹಾನಗರ ಪಾಲಿಕೆ ಆಯುಕ್ತರಾದ ಶ್ರೀಮತಿ ರೇಣುಕಾ ಅವರು ಗುರುವಾರ ಬೆಳಿಗ್ಗೆ ಕುಂದುವಾಡ ಕೆರೆ ರಸ್ತೆ ಹಾಗೂ ಹಳೇ ಕುಂದುವಾಡಕ್ಕೆ ಆಗಮಿಸಿ ವಾರ್ಡ್ ಬೀಟ್ ನಡೆಸಿದರು.

ಅನೇಕ ದೂರುಗಳು ಬಂದ ಹಿನ್ನಲೆ ಅಧಿಕಾರಿಗಳ ಜೊತೆ ಆಯುಕ್ತರು ಆಗಮಿಸಿದ್ದರು. ಈ ವೇಳೆ ಸಾರ್ವಜನಿಕರು ದೂರುಗಳ ಸರಮಾಲೆಯನ್ನ ಮುಂದಿಟ್ಟರು.

ರಸ್ತೆಯನ್ನು ಅರ್ಧ ಬರ್ಧ ಮಾಡಿ ಬಿಡಲಾಗಿದೆ, ಗುಂಡಿಯನ್ನು ಅರ್ಧ ಬರ್ಧ ಮುಚ್ಚಲಾಗಿದೆ, ಇತ್ತ ಬೀದಿ ದೀಪ ಆಫ್ ಆಗಿ ಹಲವು ವರ್ಷಗಳೇ ಕಳೆದಿವೆ, ಸ್ವಚ್ಛತೆ ಇಲ್ಲ, ಹೇಳೋರು, ಕೇಳೋರು ಯಾರೂ ಇಲ್ಲದಂತಾಗಿದೆ ಎಂದು ಅಧಿಕಾರಿಗಳಿಗೆ ಜನರು ತರಾಟೆಗೆ ತೆಗೆದುಕೊಂಡರು.




ಈ ಸಂದರ್ಭದಲ್ಲಿ ಮಾತನಾಡಿದ ಆಯುಕ್ತರಾದ ರೇಣುಕಾ, ದೊಡ್ಡದಾದ ಗುಂಡಿಗಳ ಬಗ್ಗೆ ವಾರ್ಡ್‌ನ ಸಂಬಂಧಪಟ್ಟ ಅಧಿಕಾರಿಗಳು ಯಾಕೆ ಗಮನಿಸಲ್ಲ, ಏನಾದರು ಅನಾಹುತ ಆದ ಬಳಿಕ ಗುಂಡಿ ಮುಚ್ಚುತ್ತೀರಾ, ಈ ಕೂಡಲೇ ಗುಂಡಿಗಳನ್ನು ಮುಚ್ಚಿ ಇಲ್ಲದಿದ್ದರೇ ಸಂಬಂಧಪಟ್ಟ ಅಧಿಕಾರಿಯ ಮೇಲೆ ಕ್ರಮ ವಹಿಸಲಾಗುವುದು ಎಂದು ಖಡಕ್ ಎಚ್ಚರಿಕೆ ನೀಡಿದರು.

ಇನ್ನೂ ಗ್ರಾಮದಲ್ಲಿ ಬೀದಿ ದೀಪ ಸರಿಪಡಿಸಲಾಗಿಲ್ಲ, ಚರಂಡಿ ಸ್ವಚ್ಛತೆ ಇಲ್ಲ, ಈ ಕೂಡಲೇ ಬೀದಿ ದೀಪ ಸರಿಪಡಿಸಿ, ಸ್ವಚ್ಛತೆಗೆ ಆದ್ಯತೆ ನೀಡಿ ಮೊದಲು ಜಂಗಲ್ ಕಟ್ಟಿಂಗ್ ಮಾಡಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು, ಮುಂದಿನ ವಾರ ಕೋರ್ಟ್ ಆದೇಶ ಬರಲಿದೆ, ಬಳಿಕ ಬಿಂದಾಸ್ ಬಾರ್ ಮುಂಭಾಗದ ರಸ್ತೆ ಪೂರ್ಣ ಮಾಡುತ್ತೇವೆ ಹಾಗೂ ಕೆರೆ ರಸ್ತೆ ಟೆಂಡರ್ ಹಂತದಲ್ಲಿದ್ದು ಆದಷ್ಟು ಬೇಗ ರಸ್ತೆ ನಿರ್ಮಿಸಿಕೊಡುತ್ತೇವೆ ಎಂದು ಆಯುಕ್ತರು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಮೇಯರ್ ಹೆಚ್.ಎನ್. ಗುರುನಾಥ್, ಮುಖಂಡರಾದ ಜೆ. ಮಾರುತಿ, ಡಿಜಿ ಪ್ರಕಾಶ್, ಮಾರುತೇಶ್, ರಾಜೂ ಕರೂರು, ವಿಜಯ್, ಗಣೇಶ್, ಮಧು ನಾಗರಾಜ್, ಸಂತೋಷ್, ಮಡಿವಾಳಪ್ಪ, ನವೀನ್ ಸೇರಿದಂತೆ ಗ್ರಾಮಸ್ಥರು, ಅಧಿಕಾರಿಗಳು ಮತ್ತಿತರರಿದ್ದರು.

## ಕುಣಿಬೆಳಕೆರೆ ಗ್ರಾಮದ ಶ್ರೀ ಬೀರಲಿಂಗೇಶ್ವರ ಸ್ವಾಮಿ ದರ್ಶನ ಪಡೆದ ವಿನಯ್ ಕುಮಾರ್

**ದಾವಣಗೆರೆ:** ಹರಿಹರ ತಾಲೂಕಿನ ಕುಣಿಬೆಳಕೆರೆ ಗ್ರಾಮಕ್ಕೆ ಭೇಟಿ ನೀಡಿದ ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕರೂ ಆದ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ಅವರು ಶ್ರೀ ಬೀರಲಿಂಗೇಶ್ವರ ಸ್ವಾಮಿ ದರ್ಶನ ಪಡೆದರು.



ಎರಡು ದಿನಗಳ ಕಾಲ ನಡೆಯಲಿರುವ ಶ್ರೀ ಬೀರಲಿಂಗೇಶ್ವರ ಸ್ವಾಮಿಯ ದೊಡ್ಡ ಎಡೆ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡರು. ದೇವಸ್ಥಾನಕ್ಕೆ ಭೇಟಿ ನೀಡಿದ ವಿನಯ್ ಕುಮಾರ್ ಅವರನ್ನು ಗ್ರಾಮಸ್ಥರು ಆತ್ಮೀಯವಾಗಿ ಸನ್ಮಾನಿಸಿದರು.

ಈ ವೇಳೆ ಮಾತನಾಡಿದ ಜಿ. ಬಿ. ವಿನಯ್ ಕುಮಾರ್ ಅವರು, ಜಾತ್ರಾ ಮಹೋತ್ಸವ ನಡೆಯುತ್ತಿರುವುದು ಸಂತಸದ ವಿಚಾರ. ಕುಣಿಬೆಳಕೆರೆ ಗ್ರಾಮದ ಶ್ರೀ ಬೀರಲಿಂಗೇಶ್ವರ ಸ್ವಾಮಿ ದರ್ಶನ ಪಡೆದದ್ದು ನನಗೆ ತುಂಬಾನೇ ಮನಸ್ಸಿಗೆ ಖುಷಿ ಕೊಟ್ಟಿದೆ. ಶ್ರೀ ಬೀರಲಿಂಗೇಶ್ವರ ಸ್ವಾಮಿ ಎಲ್ಲರಿಗೂ ಒಳ್ಳೆಯದನ್ನು ಮಾಡಲಿ ಎಂದು ಪ್ರಾರ್ಥಿಸಿದರು.

ಹಬ್ಬ, ಜಾತ್ರಾ ಮಹೋತ್ಸವ ನಡೆಯಬೇಕು. ಗ್ರಾಮದ ಎಲ್ಲರೂ ಒಟ್ಟಾಗಿ ಸೌಹಾರ್ದತಯುತವಾಗಿ ಆಚರಿಸಬೇಕು. ಆದ್ರೆ, ಜಾತ್ರಾ ಮಹೋತ್ಸವ, ಹಬ್ಬ ಹರಿದಿನ, ಸಮಾರಂಭಗಳಿಗೆ ಎಷ್ಟೋ ಪ್ರಾಮುಖ್ಯತೆ ನೀಡುತ್ತೇವೆಯೋ ಅಷ್ಟೇ ಮಕ್ಕಳ ಶಿಕ್ಷಣಕ್ಕೂ ನೀಡಬೇಕಾದ ಅವಶ್ಯಕತೆ ಇದೆ ಎಂದು ಪ್ರತಿಪಾದಿಸಿದರು.

ಈ ವೇಳೆ ಬೀರೇಶ್ವರ ದೇವಸ್ಥಾನ ಸಮಿತಿ ಹಿರಿಯ ಮುಖ್ಯಸ್ಥ ಬೆಳೆಕೆರೆಪ್ಪರ್ ರಾಮಣ್ಣ, ಮುಗಳಗೆರೆ ಮಾದೇವಪ್ಪ, ಬೆಳ್ಳೂಡೆರ್ ಮಾರುತಿ, ವಿಜಯ್, ಗೋಣೆಪ್ಪರ್ ರುದ್ರಪ್ಪ, ಉಮೇಶ್ ಮುದಕಪ್ಪರ್, ರೇವಣ್ಣ, ಗುಡಳ್ಳಿ ಚಿಕ್ಕಣ್ಣ, ಉಚ್ಚ ವೀರಪ್ಪರ್ ಅರುಣ್ ಕುಮಾರ್ ಇದ್ದರು.

# ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ :** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿಗೆ ರಿನ್ಯೂವಲ್ ವಿದ್ಯಾರ್ಥಿಗಳಿಗೆ ಅರಿವು ಶೈಕ್ಷಣಿಕ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲು ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ್, ಬೌದ್ಧ, ಸಿಖ್ಖರು ಹಾಗೂ ಪಾರ್ಸಿ ಜನಾಂಗಕ್ಕೆ ಸೇರಿದವರು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಈ ಹಿಂದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸಿಇಟಿ/ಡಿ–ಸಿಇಟಿ/ಪಿಜಿ–ಸಿಇಟಿ/ನೀಟ್ ನಲ್ಲಿ ವೈದ್ಯಕೀಯ(ಬಿ.ಡಿ.ಎಸ್/ಎಂ.ಡಿ.ಎಸ್),ಆಯುಷ್ (ಬಿ.ಆಯುಷ್, ಎಂ.ಆಯುಷ್) ಇಂಜಿನಿಯರಿಂಗ್ (M.B.B.S, MD,MS) & ಟೆಕ್ನಾಲಜಿ (ಬಿ.ಇ/ಬಿ.ಟೆಕ್, ಎಂ.ಇ.ಎಂ.ಟೆಕ್), ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್ (ಬಿ.ಆರ್ಕ, ಆಯ್ಕೆಯಾದ ವೈದ್ಯಕೀಯ ದಂತ, MBA, MCA, LLB, B.sc in Horticulture, Agricultural Engineering, Dairy Technology, Forestry, Veterinary and Animal Technology, Fisheries, Sericulture, Home/ Community Sciences Food Nutrition and Dietetics, B.Pharma, M.pharma, Pharma.D, and D.pharma ಗಳಲ್ಲಿ ಆಯ್ಕೆಯಾಗಿರುವಂತಹ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಅರಿವು ರಿನ್ಯೂವಲ್ ಸಾಲ ಯೋಜನೆಯಡಿಯಲ್ಲಿ ಸಾಲ ಪಡೆಯಲು ಅಪೇಕ್ಷಿಸುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು 'ಆನ್‌ಲೈನ್' ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಅರ್ಜಿಗಳನ್ನು ವೆಬ್‌ಸೈಟ್:–kmdconline.karnataka.gov.in 'ಆನ್‌ಲೈನ್' ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನವೆಂಬರ್ 03 ರಿಂದ ಡಿಸೆಂಬರ್ 03 ರವರೆಗೆ ಅವಕಾಶವಿರುತ್ತದೆ.

ಅರ್ಜಿಗಳನ್ನು ಸಲ್ಲಿಸುವಾಗ ನಿಗಮದಿಂದ ಈ ಹಿಂದಿನ ವರ್ಷದಲ್ಲಿ ಪಡೆದಿರುವ ಸಾಲದ ಮೊತ್ತದಲ್ಲಿ ಶೇ.12% ರಷ್ಟು ಹಣವನ್ನು "ಆನ್‌ಲೈನ್' ಮುಖಾಂತರ ಪಾವತಿಸಬೇಕು ಮತ್ತು ಖಜಜಟಟಣಥಿ ಃಠಟಜ ಮತ್ತು ಸಾಲಕ್ಕೆ ಸಂಬಂಧಿಸಿದಂತೆ ಅಗತ್ಯ ದಾಖಲಾತಿಗಳನ್ನು ಜಿಲ್ಲಾ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಈ ಕಚೇರಿಯ ದೂರವಾಣಿ ಸಂಖ್ಯೆ:08156–277047 ಮತ್ತು ಇಲಾಖೆಯ ಸಹಾಯವಾಣಿ ಸಂಖ್ಯೆ 8277799990 ಹಾಗೂ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ) ಎಸ್.ಬಿ–12, 2ನೇ ಮಹಡಿ, ಜಿಲ್ಲಾಡಳಿತ ಭವನ ಚಿಕ್ಕಬಳ್ಳಾಪುರ, ರವರ ಕಚೇರಿಗೆ ಸಂಪರ್ಕಿಸಬಹುದೆಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ)ದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ

**ಚಿಕ್ಕಮಗಳೂರು:** ಚಿಕ್ಕಮಗಳೂರು ಜಿಲ್ಲೆಯಲ್ಲಿ 2025–26ನೇ ಸಾಲಿಗೆ ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ನಡೆಸಲು ಆಸಕ್ತಿಯುಳ್ಳ ಅನುಭವುಳ್ಳ ಅರ್ಹ ಸ್ವಯಂ ಸೇವಾ ಸಂಸ್ಥೆಗಳಿಗೆ (ಎನ್.ಜಿ.ಓ) ಆಸಕ್ತ ಅಭಿವ್ಯಕ್ತಿ ಸ್ವ–ಇಚ್ಛೆ (ಎಕ್ಸ್‌ಪ್ರೆಶನ್ ಆಫ್ ಇಂಟರೆಸ್ಟ್) ಅರ್ಜಿಯನ್ನು ಆಹ್ವಾನಿಸಿದ್ದು ಅರ್ಹ ಸ್ವಯಂ ಸೇವಾ ಸಂಸ್ಥೆಗಳಿಂದ ಅಭಿವ್ಯಕ್ತಿ ಸ್ವ–ಇಚ್ಛೆಯನ್ನು ಈಗಾಗಲೇ ಆಹ್ವಾನಿಸಲಾಗಿದ್ದು, ನವೆಂಬರ್ 17 ರವರೆಗೆ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಹಾಗೂ ಜಿಲ್ಲಾ ಅಂಧತ್ವ(<https://kppp.karnataka.gov.in/>) ನಿಯಂತ್ರಣಾಧಿಕಾರಿಗಳ ಕಚೇರಿ ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಮೊಬೈಲ್ ಸಂಖ್ಯೆ (8762710337) ಅಥವಾ ಮಿಂಚಂಚೆ ವಿಳಾಸ( dbcschikmagalur@gmail.com <mailto:dbcschikmagalur@gmail.com>)ವನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಧತ್ವ ನಿವಾರಣಾಧಿಕಾರಿಗಳು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಸಮಿತಿ ಸಭೆ

**ಗದಗ :** ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಅಕ್ಟೋಬರ್ 31 ರಂದು ಮಧ್ಯಾಹ್ನ 1.30 ಗಂಟೆಗೆ ರಾಜ್ಯದ ಕಾನೂನು, ನ್ಯಾಯ, ಮಾನವಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗದಗ ಜಿಲ್ಲಾ ಯೋಜನಾ ಸಮಿತಿ ಅಧ್ಯಕ್ಷರಾದ ಡಾ.ಎಚ್.ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಗದಗ ಜಿಲ್ಲಾ ಯೋಜನಾ ಸಮಿತಿ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಗದಗ ಜಿಲ್ಲಾ ಯೋಜನಾ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೂಲದಾಖಲಾತಿ ಪರಿಶೀಲನೆ

**ಗದಗ :** ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಜ್ಯ ಮಟ್ಟದ ಮಾನವ ಸಂಪನ್ಮೂಲ ಖಠಿ –2025–26 ಅನುಮೋದನೆಯಂತೆ ಸಂಚಾರಿ ಆರೋಗ್ಯ ಘಟಕಗಳಿಗೆ ಶುಶ್ರೂಷ ಅಧಿಕಾರಿಗಳ ಹುದ್ದೆ ಅನುಮೋದನೆಯಾಗಿದ್ದು. ಸದರಿ ಹುದ್ದೆಗಳನ್ನು ರೋಷ್ಟರ್ ಕಂ ಮೆರಿಟ್ ಆಧರಿಸಿ ನಿಬಂಧನೆಗೊಳಪಟ್ಟು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸದರಿ ಶುಶ್ರೂಷ ಅಧಿಕಾರಿಗಳ ಹುದ್ದೆಗೆ ಅಪಲೋಡ್ ಆಗಿರುವ ಅರ್ಜಿಗಳಲ್ಲಿ ಈ ಮೊದಲು ರೋಷ್ಟರ್ ಕಂ ಮೆರಿಟ್ ಅಳವಡಿಸಿದ 1:10 ಅಭ್ಯರ್ಥಿಗಳನ್ನು ಮೂಲದಾಖಲಾತಿಗೆ ಆಹ್ವಾನಿಸಲಾಗಿತ್ತು ಆದರೆ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ ಸದರಿ ರೋಷ್ಟರ್ ಕಂ ಮೆರಿಟ್ ಅಳವಡಿಸಿದ ಪಟ್ಟಿಯ ಮುಂದಿನ 1:20 ಅನುಪಾತದ ಅಭ್ಯರ್ಥಿಗಳನ್ನು ದಿನಾಂಕ: 03.11.2025 ರಿಂದ 05.11.2025ರ ಸಂಜೆ 04.00 ವರೆಗೆ ಕಚೇರಿ ದಿನಗಳವರೆಗೆ ಖುದ್ದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿ ಗದಗ ಇಲ್ಲಿಗೆ ಮೂಲ ದಾಖಲಾತಿಗಳೊಂದಿಗೆ ಪರಿಶೀಲನಗೆ ಹಾಜರಾಗಲು ಇ–ಮೇಲ್ ಮೂಲಕ ಆಹ್ವಾನಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿಯ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಪ್ರತಿ ತಿಂಗಳು ನಿರುದ್ಯೋಗಿ ಸ್ವಯಂ ಘೋಷಣೆ ಸಲ್ಲಿಸುವಂತೆ ಆದೇಶ

**ಚಿಕ್ಕಬಳ್ಳಾಪುರ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆಯ ನೋಂದಣಿ 2022–23 ರಿಂದಲ್ಲೇ ಪ್ರಾರಂಭವಾಗಿದ್ದು, 2022–23ನೇ ಸಾಲಿನಿಂದ ಉತ್ತೀರ್ಣರಾಗಿ 180 ದಿನಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನವರಿ–2024 ರಿಂದ ನೇರ ನಗದು ವರ್ಗಾವಣೆ ಮಾಡಲಾಗಿತ್ತಿದೆ. ಕೆಲವು ತಿಂಗಳುಗಳ ಹಿಂದೆ ರಾಜ್ಯ ಸರ್ಕಾರವು 3 ತಿಂಗಳಿಗೆ ಒಮ್ಮೆ "ನಾನು ನಿರುದ್ಯೋಗಿ" ಮತ್ತು "ಸ್ವಯಂ ಉದ್ಯೋಗ ಹೊಂದಿರುವುದಿಲ್ಲ" ಎಂದು ಸ್ವಯಂ ಘೋಷಣೆ ಮಾಡುವಂತೆ ಸೂಚಿಸಿತ್ತು.

ಆದರೆ ಆ ಆದೇಶವನ್ನು ಪುನಃ ತಿದ್ದುಪಡಿಗೊಳಿಸಿ ದಿನಾಂಕ: 27/10/2025 ರಿಂದ, ಮುಂದೆ ಪ್ರತಿ ತಿಂಗಳು 25ನೇ ತಾರೀಖಿನ ಒಳಗೆ ಅಭ್ಯರ್ಥಿಯು "ನಾನು ನಿರುದ್ಯೋಗಿ" ಮತ್ತು "ಸ್ವಯಂ ಉದ್ಯೋಗ ಹೊಂದಿರುವುದಿಲ್ಲ" ಎಂದು ಆನ್‌ಲೈನ್‌ನಲ್ಲಿ (https://sevasindhugs.karnataka.gov.in) ಘೋಷಣೆ ಮಾಡಬೇಕೆಂದು ತಿಳಿಸಿದೆ. ಆದುದರಿಂದ ಎಲ್ಲಾ ಫಲಾನುಭವಿ ಅಭ್ಯರ್ಥಿಗಳು ಪ್ರತಿ ತಿಂಗಳು "ನಾನು ನಿರುದ್ಯೋಗಿ" "ಸ್ವಯಂ ಉದ್ಯೋಗ ಹೊಂದಿರುವುದಿಲ್ಲ" ಎಂದು ಆನ್‌ಲೈನ್‌ನಲ್ಲಿ ಘೋಷಣೆ ಮಾಡಬೇಕೆಂಬ ಮಾಹಿತಿಯನ್ನು ಫಲಾನುಭವಿಯಾಗಿರುವ ಎಲ್ಲಾ ಅಭ್ಯರ್ಥಿಗಳಿಗೆ ಸೂಚಿಸಲು ತಿಳಿಸಲಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಎಂ. ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೃಹಲಕ್ಷ್ಮೀ ಸಹಕಾರ ಸಂಘ ಸ್ಥಾಪನೆಯಿಂದ ಮಹಿಳೆಯರು ಇನ್ನಷ್ಟು ಸದೃಢ




**ಚಿಕ್ಕಮಗಳೂರು:** ಗೃಹಲಕ್ಷ್ಮೀ ಸಹಕಾರ ಸಂಘವನ್ನು ಆರಂಭಿಸಲು ಸರ್ಕಾರ ತೀರ್ಮಾನಿಸಿರುವುದರಿಂದ ಮುಂದೆ ಜಿಲ್ಲೆಯ ಎಲ್ಲ ಗೃಹಲಕ್ಷ್ಮೀಯರು ಕೂಡ ಈ ಸಹಕಾರ ಸಂಘಕ್ಕೆ ಸದಸ್ಯರಾಗುವ ಮೂಲಕ ಮತ್ತಷ್ಟು ಆರ್ಥಿಕವಾಗಿ ಸಬಲರಾಗಲು ಸಹಕಾರಿಯಾಗಲಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿಯ ಅಬ್ದುಲ್ ನಜೀರ್‌ಸಾಬ್ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಆರಂಭದಲ್ಲಿ ಪ್ರತಿ ಜಿಲ್ಲೆಯಿಂದ 65 ಜನ ಪ್ರವರ್ತಕರನ್ನು ಆಯ್ಕೆ ಮಾಡಬೇಕಾದ ಹಿನ್ನೆಲೆಯಲ್ಲಿ ನಮ್ಮ ಜಿಲ್ಲೆ ಈಗಾಗಲೇ 65 ಪ್ರವರ್ತಕರನ್ನು ಇಲಾಖೆ ಮತ್ತು ಗ್ಯಾರಂಟಿ ಸಮಿತಿ ರಾಜ್ಯ ಸಹಕಾರ ಸಂಘಕ್ಕೆ ನಿಯೋಜಿಸಿದೆ ಎಂದು ಅವರು ಎಂದು ಹೇಳಿದರು.

ಒಟ್ಟಾರೆ ಜಿಲ್ಲೆಯಲ್ಲಿ ಪಂಚ ಗ್ಯಾರಂಟಿಗಳ ಪರವಾಗಿ ಇದುವರೆಗೂ ಕೂಡ 2100 ಕೋಟಿ ರೂಪಾಯಿಗಳು 10 ಲಕ್ಷಕ್ಕೂ ಹೆಚ್ಚು ಜನರಿಗೆ ಗ್ಯಾರಂಟಿ ಯೋಜನೆಯ ಮುಖಾಂತರ ತಲುಪಿಸಲಾಗಿದೆ ಎಂದು ಹೇಳಿದರು.

ಗೃಹಜ್ಯೋತಿ ಯೋಜನೆಗೆ ಸಂಬಂಧಿಸಿದಂತೆ ಮೆಸ್ಕಾಂ ಅಧಿಕಾರಿ ಸಭೆಗೆ ಗೈರು ಹಾಜರಾಗಿರುವುದಲ್ಲದೆ, ಮಾಹಿತಿ ನೀಡದೆ ಅಸಹಕಾರ ತೋರುತ್ತಿರುವುದರ ಸಭೆಯಲ್ಲಿ ಚರ್ಚೆಯಾಗಿ ತೀವ್ರ ಅಸಮಾಧಾನಕ್ಕೆ ಕಾರಣವಾಯಿತು.

ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಜೆ.ಜಾರ್ಜ್ ಅವರು ಇಡೀ ರಾಜ್ಯದಲ್ಲಿ ಅತ್ಯಂತ ಯಶಸ್ವಿಯಾಗಿ ಯೋಜನೆಯನ್ನು ಜಾರಿಮಾಡುತ್ತಿದ್ದರೂ ಸಹ ತವರು ಜಿಲ್ಲೆಯಲ್ಲಿ ಅಧಿಕಾರಿಗಳು ಸ್ಪಂದಿಸದೇ ಇರುವುದಕ್ಕೆ ಸದಸ್ಯರುಗಳು ತೀವ್ರವಾಗಿ ಆಕ್ಷೇಪಿಸಿದರು. ಈ ಬಗ್ಗೆ ಉಸ್ತುವಾರಿ ಸಚಿವರ ಗಮನಕ್ಕೆ ತರುವಂತೆ ನಿರ್ಣಯ ಕೈಗೊಳ್ಳಲಾಯಿತು.

ಅಹಾರ ಪಡಿತರ ಚೀಟಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಇದುವರೆಗೂ ಕೂಡ 2,58,000 ಆಹಾರ ಪಡಿತರ ಕಾರ್ಡ್‌ಗಳಿವೆ. 2,04,000ಕ್ಕೂ ಹೆಚ್ಚು ಬಿ.ಪಿ.ಎಲ್. ಕಾರ್ಡ್‌ಗಳಿವೆ. ಬಿಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸಲಾಗುತ್ತದೆ ಎಂಬ ಗೊಂದಲ ಸೃಷ್ಟಿಯಾಗಿದೆ. ಕೇವಲ 3000 ಕಾರ್ಡ್‌ಗಳನ್ನು ರದ್ದುಪಡಿಸಿಲ್ಲ. ಬದಲಾಗಿ ಅವುಗಳನ್ನು ಎಪಿಎಲ್ ಕಾರ್ಡ್‌ಗಳಾಗಿ ಪರಿವರ್ತನೆ ಮಾಡಲಾಗಿದೆ ಎಂದು ತಿಳಿಸಿದರು.

ಆರ್ಥಿಕ ಮಿತಿಯನ್ನು ಮೀರಿ ಮತ್ತು ಹೆಚ್ಚು ಜಮೀನನ್ನು ಹೊಂದಿದ್ದು, ಆದಾಯ ತೆರಿಗೆ ಪಾವತಿಸುತ್ತಿರುವರನ್ನು ಗುರುತಿಸಿ ಅವರನ್ನು ಬಿಪಿಎಲ್ ಕಾರ್ಡ್‌ನಿಂದ ಎಪಿಎಲ್ ಕಾರ್ಡ್‌ಗೆ ಪರಿವರ್ತಿಸಲಾಗಿದೆ ಎಂದು ಹೇಳಿದ ಅವರು ಇದಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರು ಯಾವುದೇ ಗೊಂದಲಕ್ಕೆ ಒಳಗಾಗಬಾರದು ಎಂದರು.

ಈ ಸಂದರ್ಭದಲ್ಲಿ ಮಾತನಾಡಿದ ಇಲಾಖೆಯ ಅಧಿಕಾರಿಗಳು ಯಾವುದೇ ಅರ್ಹ ಬಡವರಿಗೆ ಸೇರಿದ ಬಿಪಿಎಲ್ ಕಾರ್ಡ್‌ಗಳನ್ನು ರದುಗೊಳಿಸುವುದಿಲ್ಲ ಎಂದು ಭರವಸೆ ನೀಡಿದರು.

ನವೆಂಬರ್ 1 ರಂದು ಕನ್ನಡ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಛಾಯಾಚಿತ್ರ ಪ್ರದರ್ಶನಗೊಳ್ಳುತ್ತಿದ್ದು, ಇದನ್ನು ಸಾರ್ವಜನಿಕರು ಆ ಛಾಯಾ ಚಿತ್ರ ಪ್ರದರ್ಶನವನ್ನು ವೀಕ್ಷಿಸಬೇಕು ಎಂದು ಮನವಿ ಮಾಡಿದರು,

ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು, ಸದಸ್ಯರು, ಜಿಲ್ಲಾ ಪಂಚಾಯಿತಿ ಆಡಳಿತ ಸಹಾಯಕ ಕಾರ್ಯದರ್ಶಿ ಎಸ್.ನಯನ, ಇತರ ಅಧಿಕಾರಿಗಳು ಭಾಗವಹಿಸಿದ್ದರು.

# ಐದು ದಿನಗಳ ತರಬೇತಿ ಕಾರ್ಯಾಗಾರ

**ಚಿಕ್ಕಬಳ್ಳಾಪುರ:** ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ "ಸಂಶೋಧನೆ, ಪ್ರಕಟಣೆ ನೀತಿಶಾಸ್ತ್ರ ಮತ್ತು ದತ್ತಾಂಶ ವಿಶ್ಲೇಷಣೆ" ("Research, Publication Ethics and Data Analysis") ವಿಷಯದ ಮೇಲೆ ನವೆಂಬರ್ 11 ರಿಂದ 15 ರವರೆಗೆ ಐದು ದಿನಗಳ ತರಬೇತಿ ಕಾರ್ಯಾಗಾರವನ್ನು ಅಕಾಡೆಮಿಯ ಕಚೇರಿಯಲ್ಲಿ ಆಯೋಜಿಸಲಾಗುತ್ತಿದೆ.ಈ ಕಾರ್ಯಾಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ಮತ್ತು ತಂತ್ರಜ್ಞಾನಿಗಳು ಉಪನ್ಯಾಸಗಳನ್ನು ನೀಡಲಿದ್ದು, ಆಸಕ್ತ ವಿಜ್ಞಾನ ಪದವಿ, ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳು, ಸಂಶೋಧನಾ ವಿದ್ಯಾರ್ಥಿಗಳು, ಉಪನ್ಯಾಸಕರು/ಪ್ರಾಧ್ಯಾಪಕರು ಹಾಗೂ ವಿಜ್ಞಾನಾಸಕ್ತರು ಭಾಗವಹಿಸಬಹುದಾಗಿದೆ. ಆಸಕ್ತ ಪ್ರತಿನಿಧಿಗಳು ನವೆಂಬರ್ 5 ರೊಳಗಾಗಿ ɿttps://forms.gle/UNrBg9wiBzgQBMVD6 ಮೂಲಕ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಗಾರದ ಸಂಯೋಜಕರಾದ ಶ್ರೀನಿವಾಸು. ಕೆ.ವಿ., ವೈಜ್ಞಾನಿಕಾಧಿಕಾರಿ ಇವರ ಮೊ: 9620767819 ಗೆ ಸಂಪರ್ಕಿಸಬಹುದು ಅಥವಾ ಅಕಾಡೆಮಿಯ ವೆಬ್ ಸೈಟ್ https://kstacademy.in ಅನ್ನು ವೀಕ್ಷಿಸಬಹುದು ಎಂದು ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಆನಂದ್ ಆರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ಲಾಸ್ಟಿಕ್ ಧ್ವಜ ನಿಷೇಧ

**ದಾವಣಗೆರೆ :** ನವಂಬರ್ 1 ರಂದು ಆಚರಿಸಲಿರುವ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಪರಿಸರ ಸಂರಕ್ಷಣೆಗಾಗಿ ಹಾಗೂ ಪರಿಸರ ಸ್ನೇಹಿಯಾಗಿ ಆಚರಿಸಲು ಸಾರ್ವಜನಿಕರಲ್ಲಿ ಮನವಿ ಮಾಡಿ ಜಿಲ್ಲೆಯಾದ್ಯಂತ ಪ್ಲಾಸ್ಟಿಕ್ ಧ್ವಜಗಳ ಮಾರಾಟ ಮತ್ತು ಬಳಸದಂತೆ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಅಧಿಕಾರಿ ತಿಳಿಸಿದ್ದಾರೆ.ಕೈಯಿಂದ ನೂಲುವ ಮತ್ತು ಕೈಯಿಂದ ನೇಯ್ದ ಅಥವಾ ಯಂತ್ರದಿಂದ ಮಾಡಿರುವ ಹಾಗೂ ಹತ್ತಿ ಪಾಲಿಸ್ಟರ್, ಉಣ್ಣೆ, ರೇಷ್ಮೆ ಖಾದಿಯಿಂದ ಮಾಡಿರುವ ಧ್ವಜಗಳನ್ನು ಬಳಸಬೇಕು. ಪ್ಲಾಸ್ಟಿಕ್ ಧ್ವಜ ಮಾರಾಟ ಮಾಡುವಂತಹ ಅಂಗಡಿ ಮಾಲಿಕರುಗಳ ವಿರುದ್ಧ ಪರಿಸರ ಸಂರಕ್ಷಣಾ ಕಾಯ್ದೆ ಪರಿಸರ ಸಂರಕ್ಷಣಾ ಕಾಯ್ದೆಯಡಿ ಕ್ರಮಕೈಗೊಳ್ಳಲಾಗುವುದು. ಕನ್ನಡ ರಾಜ್ಯೋತ್ಸವ ದಿನಾಚರಣೆಯ ಪ್ರಯುಕ್ತ ಪ್ಲಾಸ್ಟಿಕ್ ಧ್ವಜಗಳ ಮಾರಾಟ ಮತ್ತು ಉಪಯೋಗ ಮಾಡಬಾರದು.

# ಯುವ ಸಂಸತ್ತು ಸ್ಪರ್ಧೆ



**ಚಿಕ್ಕಮಗಳೂರು:** ವಿಧಾನಸೌಧದಲ್ಲಿ ಇತ್ತೀಚೆಗೆ ನಡೆದ ರಾಜ್ಯಮಟ್ಟದ ಯುವ ಸಂಸತ್ತು ಸ್ಪರ್ಧೆಯಲ್ಲಿ ಶೃಂಗೇರಿಯ ಜೆ.ಸಿ.ಎಂ.ಬಿ. ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ಇಶಾನಾ ಅವರು ದ್ವಿತೀಯ ಸ್ಥಾನ ಪಡೆದಿದ್ದು, ನವದೆಹಲಿಯಲ್ಲಿ ನಡೆಯಲಿರುವ ರಾಷ್ಟ್ರಮಟ್ಟದ ಯುವ ಸಂಸತ್ತು ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ. ಇಶಾನಾ ಕೆ.ವೆಂಕಟೇಶಮೂರ್ತಿ ಹಾಗೂ ಶುಭಲಕ್ಷ್ಮೀ ದಂಪತಿಯ ಪುತ್ರ.

ಇದೇ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ನಗರದ ಬಸವನಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ ಕೆ.ಎಲ್.ಜ್ಯೋತಿ ಸಮಾಧಾನಕರ ಬಹುಮಾನಕ್ಕೆ ಪಾತ್ರರಾಗಿದ್ದಾರೆ. ಈಕೆ ಲೋಕೇಶಪ್ಪ ಹಾಗೂ ಲಲಿತಮ್ಮ ಅವರ ಪುತ್ರಿ. ಇಬ್ಬರನ್ನೂ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕರು, ಕಾಲೇಜಿನ ಪ್ರಾಚಾರ್ಯರು, ಎಲ್ಲ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರು, ಉಪನ್ಯಾಸಕರು, ಸಿಬ್ಬಂದಿ ಅಭಿನಂದಿಸಿದ್ದಾರೆ.

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಇದಕ್ಕೂ ಮೊದಲು ನಡೆದ ಜಿಲ್ಲಾ ಮಟ್ಟದ ಈ ಸ್ಪರ್ಧೆಯಲ್ಲಿ ಇವರಿಬ್ಬರೂ ವಿಜೇತರಾಗಿದ್ದರು.

# ವಿದ್ಯಾರ್ಥಿನಿಲಯಗಳಿಗೆ ಸೂಕ್ತ ಕಟ್ಟಡ ಬೇಕಾಗಿದೆ

**ಚಿಕ್ಕಬಳ್ಳಾಪುರ:** 2025–26ನೇ ಸಾಲಿಗೆ ಚಿಕ್ಕಬಳ್ಳಾಪುರ ತಾಲ್ಲೂಕು ಕೇಂದ್ರಸ್ಥಾನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 1 ಬಾಲಕರ ಮತ್ತು 1 ಬಾಲಕಿಯರ 100 ಸಂಖ್ಯಾಬಲದ ಇಂಜಿನಿಯರಿಂಗ್ ಮತ್ತು ಮೆಡಿಕಲ್ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ನಗರ ವ್ಯಾಪ್ತಿಗೆ ಹೊಂದಿಕೊಂಡಿರುವಂತಹ ಹಾಗೂ ಪ್ರತ್ಯೇಕವಾಗಿ ವಿದ್ಯಾರ್ಥಿಗಳ ವಾಸಕ್ಕೆ ಯೋಗ್ಯವಾದ ಬಾಡಿಗೆಗೆ ಕಟ್ಟಡಗಳು ಅವಶ್ಯಕವಾಗಿದ್ದು, ಕನಿಷ್ಠ 100 ವಿದ್ಯಾರ್ಥಿಗಳಿಗೆ

ಸ್ಥಳಾವಕಾಶವಾಗುವ ಕೊಠಡಿಗಳು, ಪ್ರತ್ಯೇಕ ಅಡುಗೆ ಕೋಣೆ, ಡೈನಿಂಗ್ ಹಾಲ್, ಸ್ವಂತ ಕೊಳವೆ ಬಾವಿ, ಕನಿಷ್ಠ 10 ಶೌಚಾಲಯ, 10 ಸ್ನಾನದ ಗೃಹಗಳು, ಕಟ್ಟಡಕ್ಕೆ ಸೂಕ್ತ ಒಳಚರಂಡಿ ವ್ಯವಸ್ಥೆ, ಉತ್ತಮ ಬೆಳಕಿನ ವ್ಯವಸ್ಥೆ, ಕಟ್ಟಡದ ಅಕ್ಕ ಪಕ್ಕದಲ್ಲಿ ಯಾವುದೇ ರೀತಿಯ ವಿದ್ಯುತ್ ತಂತಿಗಳು ಹಾದುಹೋಗಿರದ ಹಾಗೂ ಈ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹೊಂದಿರುವ 2 ಸೂಕ್ತ ಕಟ್ಟಡಗಳು ಬೇಕಾಗಿರುತ್ತದೆ.

ಬಾಡಿಗೆಯು ಲೋಕೋಪಯೋಗಿ ಇಲಾಖೆ ನಿಗಧಿಪಡಿಸುವ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ ಹಾಗೂ ಜಿಲ್ಲಾ ಸಮಿತಿಯು ನಿಗಧಿಪಡಿಸಿರುವ ಬಾಡಿಗೆ ದರಕ್ಕೆ ಒಪ್ಪಿಗೆ ನೀಡುವಂತಹ ಆಸಕ್ತಿಯುಳ್ಳ ಕಟ್ಟಡದ ಮಾಲೀಕರು ನವೆಂಬರ್ 10 ರ ಒಳಗೆ ಕಟ್ಟಡಕ್ಕೆ ಸಂಬಂಧಿಸಿದ ಕಟ್ಟಡದ ಮಾದರಿ ನಕ್ಷೆ, ಉಪನೋಂದಣಾಧಿಕಾರಿ, ಚಿಕ್ಕಬಳ್ಳಾಪುರ

ತಾಲ್ಲೂಕು ರವರಿಂದ ನಿವೇಶನ ಮೌಲ್ಯಾಂಕ ದೃಢೀಕರಣ ಪತ್ರ. ಕಟ್ಟಡದ ಮಾಲೀಕರಿಂದ ಒಪ್ಪಿಗೆ ಪತ್ರ. ಕಟ್ಟಡ ಜಾಗದ ಕರಾರು ಪತ್ರಗಳನ್ನು ತಾಲ್ಲೂಕು ಕಲ್ಯಾಣಾಧಿಕಾರಿಗಳ ಕಚೇರಿ ಹಿಂದುಳಿದ ವರ್ಗಗಳ ಕಲ್ಯಾಣ

ಇಲಾಖೆ ಮುಕುಂದರಾಯ ಸ್ವಾಮಿ ದೇವಸ್ಥಾನದ ಪಕ್ಕದ ರಸ್ತೆ, ವಾರ್ಡ್ ನಂ 24, ವಾಪಸಂದ್ರ ಚಿಕ್ಕಬಳ್ಳಾಪುರ–562101 ಇಲ್ಲಿಗೆ ಸಲ್ಲಿಸುವುದು. ಹೆಚ್ಚಿನ ವಿವರಗಳಿಗಾಗಿ ಕಚೇರಿ ದೂರವಾಣಿ ಸಂಖ್ಯೆ:08156–200160 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು ಕಲ್ಯಾಣಾಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯಮಟ್ಟದ ಅಬಾಕಸ್ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ವಿದ್ಯಾರ್ಥಿಗಳು



**ಚಿಕ್ಕಮಗಳೂರು:** ಐಡಿಯಲ್ ಪ್ಲೇ ಅಬಾಕಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ವತಿಯಿಂದ ಆಯೋಜಿಸಲಾದ 20ನೇ ರಾಜ್ಯಮಟ್ಟದ ಅಬಾಕಸ್ ಮತ್ತು ಮೆಂಟಲ್ ಅರ್ಥಮೆಟಿಕ್ಸ್ 2025ರ ಸ್ಪರ್ಧೆಯಲ್ಲಿ ನಗರದ ರಾಮನಹಳ್ಳಿ ಅಬಾಕಸ್ ಸೆಂಟರ್‌ನ ಮಕ್ಕಳು ಭಾಗವಹಿಸಿ ವಿಜೇತರಾಗಿದ್ದಾರೆ ಎಂದು ಶಿಕ್ಷಕಿ ಶಿಲ್ಪರಮೇಶ್ ತಿಳಿಸಿದರು.ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಅಭಿನಂದಿಸಿ ಮಾತನಾಡಿದ ಅವರು ಮೂಡಬಿದರೆಯ ಆಳ್ವಾಸ್ ಪಿ.ಯು ಕಾಲೇಜಿನ ಕೆ. ಅಮರನಾಥ್ ಶೆಟ್ಟಿ ವೇದಿಕೆಯಲ್ಲಿ ನಡೆದ ಈ ಸ್ಪರ್ಧೆಯಲ್ಲಿ ಖುಷಿ.ಕೆ 3ನೇ ಬಹುಮಾನ, ಸಮನ್ವಿತಾ 4ನೇ ಬಹುಮಾನ, ಆರ್. ಮೋನಿಷಾ 5ನೇ ಬಹುಮಾನ, 2ನೇ ರನ್ನರಫ್ ಸ್ಥಾನವನ್ನು ಶ್ರೇಯಸ್.ಕೆ, ಹರ್ಷಿಕ ಹೆಚ್.ಸಿ, ಫರ್ಮನ್, 3ನೇ ರನ್ನರಫ್ ಸ್ಥಾನವನ್ನು ಸಂಯೋಗ್ ಹೆಚ್.ಎಸ್, ಅರ್‌ಮನ್, ಕೃತಿಕಾ ಸಿ.ಕೆ, ಆಪ್ತಿ ಅವ್ಯೂಕ್ತ, ಯೋಹನ್.ಡಿ, ಮನ್ವಿತಾ.ಸಿ.ಕೆ, ಎಲೀಷಾ ಎಲ್ ವೈಭವಿ ಬಹುಮಾನ ಪಡೆದಿರುವುದಾಗಿ ತಿಳಿಸಿದರು.

# ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿಗೆ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಮತಿಯ ಸಮುದಾಯಕ್ಕೆ ಸೇರಿದವರು 'ಆನ್‌ಲೈನ್ kccdclonline.karnataka.gov.in ನ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ನವೆಂಬರ್ 30 ರೊಳಗೆ ಸಲ್ಲಿಸಬಹುದು.ಯೋಜನೆಗಳ ವಿವರ: 1) ಅರಿವು ಯೋಜನೆ. (ಕೆಎಂಡಿಸಿ ವೆಬ್ ಸೈಟ್ ನಲ್ಲಿ ಈಗಾಗಲೇ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಮತ್ತೆ ಕೆಸಿಸಿಡಿಸಿ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸುವ ಅಗತ್ಯವಿರುವುದಿಲ್ಲ.) 2) ವಿದೇಶಿ ವಿಶ್ವವಿದ್ಯಾಲಯದಲ್ಲಿ ಉನ್ನತ ಶಿಕ್ಷಣಕ್ಕಾಗಿ ಸಾಲ ಯೋಜನೆ. 3) ಶ್ರಮಶಕ್ತಿ ಯೋಜನೆ. 4) ಶ್ರಮಶಕ್ತಿ ವಿಶೇಷ ಮಹಿಳಾ ಯೋಜನೆ. 5) ವೃತ್ತಿ ಪ್ರೋತ್ಸಾಹ ಯೋಜನೆ. 6) ಸ್ವಾವಲಂಬಿ ಸಾರಥಿ ಯೋಜನೆ (ಪ್ಯಾಸೆಂಜರ್ ಆಟೋರಿಕ್ಷಾ/ಟ್ಯಾಕ್ಸಿ/ಗೂಡ್ಸ್). 7) ವ್ಯಾಪಾರ/ಉದ್ಯಮಗಳಿಗೆ ನೇರ ಸಾಲ ಯೋಜನೆ. 8) ಗಂಗಾ ಕಲ್ಯಾಣ ಯೋಜನೆ. 9) ಮಹಿಳಾ ಸ್ವ–ಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆ.


**ಶಿವಮೊಗ್ಗ ಮಹಾನಗರ ಪಾಲಿಕೆ, ಶಿವಮೊಗ್ಗ.**

Ph: 08182-2268512 E-mail: ka.shivamogga.cc@gmail.com

ಸಂಖ್ಯೆ: ಶಿಮನಪಾ/ಆ.ವಿ/ಸಿಆರ್/14/2025–26 ದಿನಾಂಕ: 31/10/2025

**ಟೆಂಡರ್ ಪ್ರಕಟಣೆ**

ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 35 ವಾರ್ಡ್ ಗಳಲ್ಲಿ ಬೀದಿ ನಾಯಿಗಳ ಸಂತಾನಹರಣ ಶಸ್ತ್ರ ಚಿಕಿತ್ಸೆ ಮತ್ತು ರೇಬಿಸ್ ಲಸಿಕಾ ಕಾರ್ಯಕ್ರಮ ಮಾಡುವುದು ನಿರಂತರವಾಗಿರುವುದು ಅವಶ್ಯವಾಗಿರುತ್ತದೆ. (ಪ್ರತಿ 6 ತಿಂಗಳಿಗೊಮ್ಮೆ ಸಂತಾನೋತ್ಪತ್ತಿ ಆಗುವುದರಿಂದ) ಅದರಂತೆ 2025–26 ನೇ ಸಾಲಿನಲ್ಲಿ ಬೀದಿ ನಾಯಿಗಳನ್ನು ಹಿಡಿದು ತಂದು ಶಸ್ತ್ರಚಿಕಿತ್ಸೆ ಕಾರ್ಯ ನಿರ್ವಹಿಸಲು ಮಾನ್ಯ ಆಯುಕ್ತರು ಮಹಾನಗರ ಪಾಲಿಕೆ ಶಿವಮೊಗ್ಗ ಇವರಿಂದ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಅರ್ಹ ಗುತ್ತಿಗೆದಾರರು ಕರ್ನಾಟಕ ಪಬ್ಲಿಕ್ ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ (https://kppp.karnataka.gov.in) ಟೆಂಡರ್ ಸಲ್ಲಿಸುವುದು.

**ಕ್ರ.ಸಂ. 1. ಕಾಮಗಾರಿಗಳ ವಿವರ:** Catching Stray Dogs And Implementation of Animal Birth Control/Anti Rabies Vaccination Programme in Shivamogga City Corporation (Indent No- DMA/2025-26/SE6548) **ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ):** 48.00 **ಇ.ಎಂ.ಡಿ. ಮೊತ್ತ ರೂ.:** 96,000.00 **ಲೆಕ್ಕ ಶೀರ್ಷಿಕೆ:** 2025-26 ನೇ ಸಾಲಿನ ಪಾಲಿಕೆಯ ಸಾಮಾನ್ಯ ನಿಧಿ.

**1**. ಟೆಂಡರ್ ದಸ್ತಾವೇಜುಗಳನ್ನು ಡೌನ್‌ಲೋಡ್ ಮಾಡಿಕೊಳ್ಳುವ ಪ್ರಾರಂಭಿಕ ದಿನಾಂಕ: 03.11.2025 **2**. ಪೂರ್ವಭಾವಿ ಸಭೆ (PRE -BID MEETING): 04.11.2025 ರ ಪೂರ್ವಾಹ್ನ 11:00 ಗಂಟೆಗೆ ಮಹಾನಗರಪಾಲಿಕೆ ಶಿವಮೊಗ್ಗ
**3**. ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ:10.11.2025 ರ ಸಂಜೆ 5.00 ಗಂಟೆಗೆ

ಟೆಂಡರ್ ಷರತ್ತುಗಳು ಮತ್ತು ಹೆಚ್ಚಿನ ಮಾಹಿತಿಗಳನ್ನು ಈ ಕಛೇರಿಯ ಆರೋಗ್ಯ ವಿಭಾಗದಲ್ಲಿ ಪರಿಸರ ಅಭಿಯಂತರರು ರವರಿಂದ ಪಡೆಯಬಹುದಾಗಿದೆ. ಇವರ ಕಛೇರಿಯಿಂದ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿದೆ. ಟೆಂಡರ್‌ನ ವೇಳಾಪಟ್ಟಿ ಮತ್ತು ಷರತ್ತುಗಳ ಬದಲಾವಣೆ ಇದ್ದಲ್ಲಿ KPP–ಪ್ರೊಕ್ಯೂರ್‌ಮೆಂಟ್‌ನಲ್ಲಿ ಮಾತ್ರ ಅಧಿಸೂಚಿಸಲಾಗುವುದು, ಪತ್ರಿಕಾ ಪ್ರಕಟಣೆ ಹೊರಡಿಸಲಾಗುವುದಿಲ್ಲ.

**ಸಹಿ/– ಕಾರ್ಯಪಾಲಕ ಅಭಿಯಂತರರು**
**ಶಿವಮೊಗ್ಗ ಮಹಾನಗರ ಪಾಲಿಕೆ, ಶಿವಮೊಗ್ಗ**

ವಾ.ಸಾ.ಸಂ.ಇ/ಕೆಎಸ್‌ಎಂಸಿಎ/ಶಿ/25–26/01/11/1175


# ಸಹಕಾರ ಕೇಂದ್ರ ಬ್ಯಾಂಕ್‌ನಿಂದ 858 ಕೋಟಿ ರೂ. ಕೆಸಿಸಿ ಬೆಳೆ ಸಾಲ ವಿತರಣೆ

**ಚಿಕ್ಕಮಗಳೂರು:** ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ 2024–25ನೇ ಸಾಲಿನಲ್ಲಿ ಜಿಲ್ಲೆಯ 69850 ರೈತರಿಗೆ 983 ಕೋಟಿ ರೂ.ಗಳಷ್ಟು ಕೆಸಿಸಿ ಬೆಳೆ ಸಾಲವನ್ನು ನೀಡಲು ಇರಿಸಿಕೊಂಡಿದ್ದ ಗುರಿಯಲ್ಲಿ ಕಳೆದ ಮಾರ್ಚ್ ಅಂತ್ಯಕ್ಕೆ 56915 ರೈತರಿಗೆ 858.24 ಕೋಟಿ ರೂ.ಗಳಷ್ಟು ಕೆಸಿಸಿ ಬೆಳೆಸಾಲ ವಿತರಿಸಿದೆ.

ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನಲ್ಲಿ ನಬಾರ್ಡ್‌ನ ಕರ್ನಾಟಕ ಪ್ರಾದೇಶಿಕ ಕಚೇರಿಯ ಪ್ರಧಾನ ವ್ಯವಸ್ಥಾಪಕ ಡಾ.ಸುರೇಂದ್ರ ಬಾಬು ಅವರ ಸಮ್ಮುಖದಲ್ಲಿ ನಡೆದ ಇತ್ತೀಚೆಗೆ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಬ್ಯಾಂಕ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಪ್ರವೀಣ್ ಬಿ.ನಾಯಕ್ ಅವರು ಬ್ಯಾಂಕ್‌ನ ಪ್ರಗತಿ ವರದಿಯನ್ನು ಮಂಡಿಸಿ ಈ ಮಾಹಿತಿ ನೀಡಿದರು.

2025–26ನೇ ಸಾಲಿಗೆ ಹಣಕಾಸಿನ ಲಭ್ಯತೆ ಆಧರಿಸಿ 1000 ಕೋಟಿ ರೂ. ಕೃಷಿ ಸಾಲ ನೀಡುವ ಗುರಿ ಹೊಂದಲಾಗಿದೆ. 2024–25ನೇ ಸಾಲಿಗೆ ಶೇ.3ರ ಬಡ್ಡಿ ದರದಲ್ಲಿ 339 ರೈತರಿಗೆ 17 ಕೋಟಿ ರೂ. ಮಧ್ಯಮಾವಧಿ ಸಾಲ ವಿತರಣಾ ಗುರಿ ನಿಗದಿಪಡಿಸಿಕೊಂಡಿದ್ದು. ಕಳೆದ ಮಾರ್ಚ್ ಅಂತ್ಯಕ್ಕೆ 232 ರೈತರಿಗೆ 15.90 ಕೋಟಿ ರೂ. ವಿತರಿಸಲಾಗಿದೆ. 2024–25ನೇ ಸಾಲಿಗೆ ಒಟ್ಟು 12759 ಸಾಲಗಾರ ಸದಸ್ಯರಿಗೆ 474.67 ಕೋಟಿ ರೂ. ಕೃಷಿಯೇತರ ಸಾಲ ನೀಡಲಾಗಿದೆ. ಪ್ರಸ್ತುತ ವರ್ಷ 370 ಕೋಟಿ ರೂ.ಗಳ ಕೃಷಿಯೇತರ ಸಾಲ ವಿತರಣಾ ಗುರಿ ಹೊಂದಿದ್ದು, ಇದರೊಂದಿಗೆ ಎಲ್ಲ ವರ್ಗದ ಜನರ ಶ್ರೇಯೋಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ಬ್ಯಾಂಕ್‌ನಲ್ಲಿ ಕಳೆದ ಮಾರ್ಚ್ ಅಂತ್ಯದವರೆಗೆ ಒಟ್ಟು 6400 ಸ್ವಸಹಾಯ ಗುಂಪುಗಳಿದ್ದು, 2024–25 ರಲ್ಲಿ 61 ಸ್ವಸಹಾಯ ಗುಂಪುಗಳಿಗೆ 89 ಲಕ್ಷ ರೂ.ಗಳ ಸಾಲ ವಿತರಿಸಲಾಗಿದೆ. ಈ ಮೂಲಕ ಜಿಲ್ಲೆಯ ಬಡ ಹಾಗೂ ಹಿಂದುಳಿದ ವರ್ಗಗಳ ಮಹಿಳೆಯರ ಸಬಲೀಕರಣಕ್ಕೆ ಒತ್ತು ನೀಡಲಾಗಿದೆ. ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಬಹು ಸೇವಾ ಯೋಜನೆಯ ಮೂಲಕ 43 ಸಂಘಗಳಿಗೆ 15.97 ಕೋಟಿ ರೂ.ಗಳ ಸಾಲವನ್ನು ಕನಿಷ್ಠ ಬಡ್ಡಿ (ಶೇ.4) ದರದಲ್ಲಿ ಗೋದಾಮು ನಿರ್ಮಾಣಕ್ಕೆ ನೀಡಲಾಗಿದೆ.

2024–25ನೇ ಸಾಲಿನ ಅಂತ್ಯಕ್ಕೆ 65.10 ಕೋಟಿ ರೂ. ಷೇರು ಬಂಡವಾಳ ಹೊಂದಿದ್ದು, 2.20 ಲಕ್ಷಕ್ಕೂ ಹೆಚ್ಚು ಠೇವಣಿದಾರರ ಮೂಲಕ 1426.78 ಕೋಟಿ ರೂ.ಗಳ ವಿವಿಧ ರೀತಿಯ ಠೇವಣಿಯನ್ನು ಸಂಗ್ರಹಿಸಲಾಗಿದೆ. 2023–24ನೇ ಸಾಲಿನಲ್ಲಿ ಶಾಸನಬದ್ಧ ಲೆಕ್ಕಪರಿಶೋಧನೆ ಹಾಗೂ ನಬಾರ್ಡ್ ನಡೆಸಿದ ತಪಾಸಣೆಯಲ್ಲಿ ಈ ಬ್ಯಾಂಕ್ ಸತತವಾಗಿ ಎ.ವರ್ಗೀಕೃತ ಶ್ರೇಣಿಯನ್ನು ಹೊಂದಿದೆ. ಅದೇ ವರ್ಷ ರಾಜ್ಯ ಅಪೆಕ್ಸ್ ಬ್ಯಾಂನಿಂದ ರಾಜ್ಯದಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿರುವ ಡಿಸಿಸಿ ಬ್ಯಾಂಕ್‌ಗಳಿಗೆ ನೀಡುವ ಪ್ರಶಸ್ತಿ ಪೈಕಿ ಈ ಬ್ಯಾಂಕ್‌ಗೆ 2ನೇ ಸ್ಥಾನ ಲಭಿಸಿದ್ದು, 2 ಲಕ್ಷ ರೂ.ಗಳ ನಗದು ಪುರಸ್ಕಾರಕ್ಕೂ ಭಾಜನವಾಗಿದೆ.

# ಉನ್ನತ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಶ್ರಮವಹಿಸಬೇಕು : ತುಳಸಿದಾಸ್

**ಚಿಕ್ಕಮಗಳೂರು:** ಇತಿಹಾಸ ತಿಳಿಯದವ ಇತಿಹಾಸ ಸೃಷ್ಟಿಸಲಾರ ಎಂಬಂತೆ ದೇಶದ ಸಮಗ್ರ ಇತಿಹಾಸ ಹಾಗೂ ಸಂಸ್ಕೃತಿಯ ಬಗ್ಗೆ ಉನ್ನತ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕಾದ ಅಗತ್ಯ ಇದೆ ಎಂದು ಬೆಂಗಳೂರಿನ ಟ್ರಿಕ್ಸ್ ನಿರ್ದೇಶಕ ತುಳಸಿದಾಸ್ ಹೇಳಿದರು.

ಅವರು ಇಂದು ನಗರದ ಕೃಷಿಕ್ ಸರ್ವೋದಯ ಫೌಂಡೇಶನ್ ಏರ್ಪಡಿಸಿದ್ದ ಕೆಎಎಸ್, ಬ್ಯಾಂಕಿಂಗ್, ಪಿಎಸ್ಐ, ಪಿಸಿ, ಪಿಡಿಓ, ಎಫ್‌ಡಿಎ, ಎಸ್‌ಡಿಎ, ರೈಲ್ವೆ, ಗ್ರೂಪ್-ಸಿ ಹಾಗೂ ಇನ್ನಿತರ ಸ್ಪರ್ಧಾತ್ಮಕ ಪರೀಕ್ಷೆಗಳ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮನ್ನು ತಾವು ಗುರ್ತಿಸಿಕೊಳ್ಳಬೇಕು. ಅದಕ್ಕಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಮೂಲಕ ಉನ್ನತ ಹುದ್ದೆಯಲ್ಲಿ ಸೇವೆ ಸಲ್ಲಿಸಲು ಅನುಕೂಲವಾಗಲಿದೆ ಎಂದು ಹೇಳಿದರು.

ಸಮಾಜಕ್ಕೆ ಒಳ್ಳೆಯತನವನ್ನು ಬಿಟ್ಟುಕೊಟ್ಟು ನೀವೇನಾಗಬೇಕೆಂದು ಗುರಿ ಹೊಂದಿದ್ದೀರಿ ಅದಕ್ಕೆ ಆದ್ಯತೆ ನೀಡಿ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಕೆಲಸ ಮಾಡುವುದು ಸರಿಯಲ್ಲ ಎಂದು ಸಲಹೆ ನೀಡಿದರು.

ಮನೆಯನೆಂದು ಕಟ್ಟದಿರು, ಗುರಿಯನ್ನೆಂದು ಮುಟ್ಟದಿರು ಎಂಬಂತೆ ಆಗಬಾರದು. ಕ್ರಿಯಾತ್ಮಕವಾಗಿ, ಮುಕ್ತವಾಗಿ ಆಡಳಿತ ನಡೆಸಲು ಉನ್ನತ ಹುದ್ದೆಗಳು



ಸಹಾಯಕವಾಗುತ್ತವೆ ಎಂದು ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳಲ್ಲಿ ಯಾವುದೇ ಕೋರ್ಸ್‌ಗೆ ತರಬೇತಿ ಪಡೆಯುವ ಮುನ್ನ ಆಸಕ್ತಿ ತುಂಬಾ ಮುಖ್ಯ. ಕೃಷಿಕ ಫೌಂಡೇಶನ್ ನೀಡುತ್ತಿರುವ ಅಗತ್ಯ ತರಬೇತಿಗಳನ್ನು ಎಚ್ಚರಿಕೆಯಿಂದ ಆಲಿಸಿ ಉಪನ್ಯಾಸಕರು ನೀಡುವ ಸೂಕ್ತ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸಿ ಎಂದು ಹೇಳಿದರು.

ಉನ್ನತ ಹುದ್ದೆಗೆ ಆಯ್ಕೆಯಾಗಿ ಸೇವೆ ಸಲ್ಲಿಸುವ ಸಂದರ್ಭದಲ್ಲಿ ಸಾರ್ವಜನಿಕರು ಸಮಸ್ಯೆ ಹೇಳಲು ಬಂದಾಗ ಅವರನ್ನು ಪ್ರೀತಿ ವಿಶ್ವಾಸದಿಂದ ಮಾತನಾಡಿಸಿ ಸಾಂತ್ವಾನ ಹೇಳಿ ಸಮಸ್ಯೆಯನ್ನು ಇತ್ಯರ್ಥಪಡಿಸುವುದಾಗಿ ಭರವಸೆ ತುಂಬಿ ಎಂದರು.

ಪ್ರಸ್ತುತ ಕೃಷಿಕ್ ಸರ್ವೋದಯ ಫೌಂಡೇಶನ್‌ನಲ್ಲಿ ಪಿಎಸ್ಐ, ಪಿಸಿ, ಬ್ಯಾಂಕಿಂಗ್, ಪಿಡಿಓ, ಎಫ್‌ಡಿಎ, ಎಸ್‌ಡಿಎ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ದಾಖಲಾತಿ ಆರಂಭವಾಗಿದ್ದು, ಅರ್ಹ ಮತ್ತು ಅನುಭವಿ ಶಿಕ್ಷಕ ವೃಂದ, ಭೋಧನೆಯಲ್ಲಿ ತಂತ್ರಜ್ಞಾನ ಬಳಕೆ, ಪ್ರತಿ ಚಾಪ್ಟರ್ ನಂತರ ಪರೀಕ್ಷೆ ನಡೆಸುವ ಜೊತೆಗೆ ನೈತಿಕ ಶಿಕ್ಷಣ ನೀಡಲಾಗುವುದು ಎಂದರು.

ಪ್ರತಿ ತಿಂಗಳು ಪ್ರಚಲಿತ ಮಾದರಿ ಪರೀಕ್ಷೆ ಪಠ್ಯಕ್ರಮದ ಅನುಗುಣವಾಗಿ ನೋಟ್ಸ್‌ಗಳನ್ನು ಬರೆಸಲಾಗುತ್ತಿದ್ದು, ಪರೀಕ್ಷಾರ್ಥಿಗಳು ಶ್ರದ್ಧೆಯಿಂದ ಪಾಠ, ಸಲಹೆಗಳನ್ನು ಆಲಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೆಎಸ್‌ಎಫ್ ಅಧ್ಯಕ್ಷ ಡಾ. ಸಿ.ಕೆ ಸುಬ್ರಾಯ, ಕಾರ್ಯದರ್ಶಿ ಡಾ. ಸಿ.ಟಿ ಜಯದೇವ್, ಜಿಲ್ಲಾ ಕೋಆರ್‌ಡಿನೇಟರ್ ಎಂ.ಟಿ ಕುಳ್ಳೇಗೌಡ ಉಪಸ್ಥಿತರಿದ್ದರು.

# ಪ್ಲಾಸ್ಟಿಕ್ ಹಾಳೆ ನಿಷೇಧಿಸಲು ಜನಜಾಗೃತಿ ಕಾರ್ಯಕ್ರಮ

**ಚಿತ್ರದುರ್ಗ:** ನಗರದ ಸುತ್ತಮುತ್ತಲಿರುವ ನೂರಾರು ಎಗ್ ರೈಸ್ ತಯಾರಕರು, ಗ್ರಾಹಕರಿಗೆ ಪ್ಲಾಸ್ಟಿಕ್ ಎಲೆಗಳ ಮೇಲೆ ಎಗ್ ರೈಸ್ ಮಾರಾಟ ಮಾಡುವುದನ್ನು ನಿಲ್ಲಿಸಿ, ಸಣ್ಣ ಸಣ್ಣ ಪರಿಸರ ಸ್ನೇಹಿ ಬಾಳೆ ಎಲೆಗಳನ್ನು ಬಳಸಿ, ಗ್ರಾಹಕರ ಮೆಚ್ಚುಗೆಯನ್ನು ಗಳಿಸಿ ಕೊಳ್ಳಬೇಕು ಹಾಗೂ ಉತ್ತಮ ಪರಿಸರವನ್ನು ಉಳಿಸಿಕೊಳ್ಳಲು ಸಹಾಯ ಮಾಡಬೇಕು. ಎಗ್ ರೈಸ್ ತಯಾರಿಕರಿಗೆಂದೇ ಸೂಕ್ತವಾಗುವ ಅಳತೆಯಲ್ಲಿ ಬಾಳೆ ಎಲೆಗಳನ್ನು ಕತ್ತರಿಸಿ, ಕಡಿಮೆ ವೆಚ್ಚದಲ್ಲಿ ಬಾಳೆ ಎಲೆ ವ್ಯಾಪಾರಸ್ಥರು ಮಂಡಿಗಳಲ್ಲಿ ಮಾರಾಟ ಮಾಡುತ್ತಿದ್ದು, ಅವುಗಳನ್ನ ಹೆಚ್ಚು ಹೆಚ್ಚು ವ್ಯಾಪಾರಸ್ಥರು ಬಳಕೆ ಮಾಡಿ, ಪ್ಲಾಸ್ಟಿಕ್ ಹಾಳೆಗಳನ್ನ

ನಿಷೇಧಿಸಿಕೊಂಡು, ಜನರಲ್ಲಿ ಪರಿಸರ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಇತರ ವ್ಯಾಪಾರಸ್ಥರಿಗೆ ಮಾದರಿಯಾಗಬೇಕು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ. ಎಚ್ ಕೆ ಎಸ್ ಸ್ವಾಮಿಯವರು ಕರೆ ನೀಡಿದರು.

ಅವರು ಚಿತ್ರದುರ್ಗ ನಗರದ ಸ್ಟೇಡಿಯಂ ರಸ್ತೆಯ ಬಳಿ ಇರುವ ಶ್ರೀ ರಾಜು ಎಲೆ ಮಂಡಿ ವ್ಯಾಪಾರಸ್ಥರ ಬಳಿ, ರೈತರಿಗೆ, ಕಾರ್ಮಿಕರಿಗೆ, ವಿದ್ಯಾರ್ಥಿಗಳಿಗೆ, ವ್ಯಾಪಾರಸ್ಥರಿಗೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಮಾತನಾಡುತ್ತಿದ್ದರು.

ಸಣ್ಣ ಸಣ್ಣ ಎಗ್ ರೈಸ್ ವ್ಯಾಪಾರಸ್ಥರು, ತಿಂಡಿ ಗಾಡಿ ಮಾಲೀಕರು ಪ್ರತಿಸಾರಿಯು ತಟ್ಟೆ ತೊಳೆಯಲಾರದೆ ಪ್ಲಾಸ್ಟಿಕ್ ಎಲೆಗಳನ್ನು ಬಳಸಿ, ಬಿಸಾಡುತ್ತಿರುವ ಪ್ರವೃತ್ತಿ ಹೆಚ್ಚಾಗುತ್ತಿದ್ದು, ಇನ್ನು ಮುಂದಾದರು ಅವರು ಬಾಳೆ ಮಂಡಿಗಳಲ್ಲಿ ಕಡಿಮೆ ವೆಚ್ಚದಲ್ಲಿ ಸಿಗುವ ಸಣ್ಣ



ಸಣ್ಣ ಬಾಳೆ ಎಲೆಯ ತುಂಡುಗಳನ್ನ ಬಳಕೆ ಮಾಡಿ, ಗ್ರಾಹಕರಿಗೆ ಆಹಾರ ಸರಬರಾಜು ಮಾಡುವುದರಿಂದ, ಮಾಲಿನ್ಯವನ್ನು ತಡೆಗಟ್ಟಬಹುದು ಮತ್ತು ಜನರ ಆರೋಗ್ಯವನ್ನು ಸುಧಾರಿಸಬಹುದು ಎಂದರು.

ದಿನಕ್ಕೆ 2000 ದಿಂದ 3000 ದಷ್ಟು ಬಾಳೆ ಎಲೆಗಳನ್ನು ಮಾರಾಟ ಮಾಡುತ್ತಿರುವ ಮಂಡಿ

ಮಾಲೀಕರುಗಳು, ಉಳಿದ ಎಲೆಗಳ ತುದಿಗಳನ್ನು ಕತ್ತರಿಸಿ, ಎಗ್ ರೈಸ್ ಮಾರಾಟಗಾರರಿಗೆ,

ತಿಂಡಿ ಮಾಡುವ ಹೋಟೆಲ್ ಗಳಿಗೆ ಸರಬರಾಜು ಮಾಡುತ್ತಿದ್ದು, ಒಂದು ಎಲೆಯೂ ಸಹ ವ್ಯರ್ಥವಾಗದೆ, ಮರುಬಳಕೆಯಾಗಿ ಪರಿಸರ ಮಾಲಿನ್ಯವನ್ನು ತಡೆಗಟ್ಟುವ ನಿಟ್ಟಿನಲ್ಲಿ ಶ್ರಮವಹಿಸುತ್ತಿದ್ದಾರೆ ಎಂದರು.

ಮೂರು ರೂಪಾಯಿಗೆ ಸಿಗುವ ಒಂದು ದೊಡ್ಡ ಬಾಳೆ ಎಲೆಯಲ್ಲಿ ಐದರಿಂದ ಆರು ತುಂಡುಗಳನ್ನಾಗಿ ಕತ್ತರಿಸಿ, ಅದರ ಮೇಲೆ ಎಗ್ ರೈಸ್, ಇಡ್ಲಿ ವಡಾ, ಪೂರಿ ಸಾಗು ಮುಂತಾದ ತಿಂಡಿಗಳನ್ನು ಸರಬರಾಜು ಮಾಡಲು ಅನುಕೂಲಕರವಾಗುತ್ತದೆ,

ಹಾಗಾಗಿ ಪರಿಸರ ಮಾಲಿನ್ಯ ತಡೆಯುವ ನಿಟ್ಟಿನಲ್ಲಿ ಬಾಳೆ ಎಲೆ ಮಾರಾಟಗಾರರು ಸಹ ಹೆಚ್ಚಿನ ಮಟ್ಟದಲ್ಲಿ ಜನರೊಂದಿಗೆ ಸಹಕರಿಸಬೇಕಾಗಿದೆ ಎಂದರು.

ಎಲೆ ಮಂಡಿ ಮಾಲೀಕರಾದ ಶ್ರೀ ರಾಜಣ್ಣನವರು ಮಾತನಾಡುತ್ತಾ ಮದುವೆ ಕಾರ್ಯಕ್ರಮಗಳಿಗೆ,

ಶುಭ ಸಮಾರಂಭಗಳಿಗೆ 3000 ದಿಂದ 5000 ದವರೆಗೂ ಎಲೆಗಳನ್ನು ಸರಬರಾಜು ಮಾಡುತ್ತಿದ್ದು, ಚಿತ್ರದುರ್ಗದ ಸುತ್ತಮುತ್ತಲಿರುವ ಬಾಳೆ ಎಲೆ ಬೆಳಗಾರರಿಗೆ ಅನುಕೂಲಕರವಾಗುತ್ತಿದೆ, ಸಣ್ಣ ಸಣ್ಣ ರೈತರಿಗೆ ಬದುಕು ಕಟ್ಟಿಕೊಳ್ಳಲು ಸಹಾಯಕವಾಗಿದೆ,

# ಲಿಂಗತ್ವ ಅಲ್ಪಸಂಖ್ಯಾತರ ಮೂಲಹಂತದ ಸಮೀಕ್ಷೆಯ ಅವಧಿ ವಿಸ್ತರಣೆ

**ಬಳ್ಳಾರಿ:** ಜಿಲ್ಲೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಮೂಲಹಂತದ ಸಮೀಕ್ಷೆಯು ಈಗಾಗಲೇ ಚಾಲ್ತಿಯಲ್ಲಿದ್ದು, ಸಮೀಕ್ಷಾ ಅವಧಿಯನ್ನು ನವೆಂಬರ್ 21 ರ ವರೆಗೆ ವಿಸ್ತರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಲಿಂಗತ್ವ ಅಲ್ಪ ಸಂಖ್ಯಾತರಿಗೆ ಪುನರ್ವಸತಿ ಕಲ್ಪಿಸುವ ಸಲುವಾಗಿ (ಸಾಮಾಜಿಕ ಆರ್ಥಿಕ ಮತ್ತು ಶೈಕ್ಷಣಿಕ) ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ ಕುರಿತಂತೆ ನಿಖರ ಮಾಹಿತಿಯನ್ನು ಸಂಗ್ರಹಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಮೊದಲ ಬಾರಿಗೆ ರಾಜ್ಯಾದ್ಯಾಂತ ಲಿಂಗತ್ವ ಅಲ್ಪಸಂಖ್ಯಾತರ ಮೂಲಹಂತದ ಸಮೀಕ್ಷೆ ನಡೆಸಲಾಗುತ್ತಿದೆ.

ಅರ್ಹ ಲಿಂಗತ್ವ ಅಲ್ಪಸಂಖ್ಯಾತರ ಫಲಾನುಭವಿಗಳು ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ನೀಡಿ ತಮ್ಮ ಹೆಸರು ಹಾಗೂ ವಿವರಗಳನ್ನು ನೋಂದಾಯಿಸಿಕೊಳ್ಳಬಹುದು.

ಸಮೀಕ್ಷೆ ಸಹಾಯಕ್ಕಾಗಿ ಸಹಾಯವಾಣಿ ಸಂಖ್ಯೆ 18005992025 ಗೆ ಕರೆ ಮಾಡಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಪುಸ್ತಕ ಪ್ರಾಧಿಕಾರದ ಪ್ರಕಟಣೆಗಳಿಗೆ ಶೇ.50 ರಿಯಾಯಿತಿ

**ಬಳ್ಳಾರಿ:** ಕನ್ನಡ ರಾಜ್ಯೋತ್ಸವದ ಅಂಗವಾಗಿ 2025ರ ನವೆಂಬರ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50 ರ ರಿಯಾಯಿತಿ ದರಗಳಲ್ಲಿ ಮಾರಾಟ ಮಾಡಲಾಗುವುದು. ಪುಸ್ತಕ ಪ್ರಿಯರು ಈ ಅವಕಾಶ ಸದುಪಯೋಗಪಡಿಸಿಕೊಳ್ಳಬೇಕು ಎಂದು ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಅವರು ತಿಳಿಸಿದ್ದಾರೆ.

ಕನ್ನಡ ಪುಸ್ತಕ ಪ್ರಾಧಿಕಾರವು ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಎಲ್ಲಾ ಪ್ರಕಾರದ ಸಾಹಿತ್ಯ ಕೃತಿಗಳನ್ನು ಈವರೆಗೆ ಪ್ರಕಟಿಸುತ್ತಾ ಬಂದಿದೆ. ಇವುಗಳಲ್ಲಿ ವ್ಯಕ್ತಿ ಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ, ಕೃಷಿ ಹೀಗೆ ಹಲವು ಹತ್ತು ಪ್ರಕಾರಗಳಲ್ಲಿ ಸಾಹಿತ್ಯ ಕೃತಿಗಳನ್ನು ಇದುವರೆಗೆ ಸುಮಾರು 700ಕ್ಕೂ ಹೆಚ್ಚಿನ ಶೀರ್ಷಿಕೆಗಳನ್ನು ಮುದ್ರಿಸಿ ಪ್ರಕಟಿಸಿದೆ. ಅತ್ಯಂತ ಮೌಲಿಕವಾದ, ಪ್ರಾಜ್ಞರಿಂದ ರಚಿತವಾದ ಈ ಕೃತಿಗಳನ್ನು ಜನಸಾಮಾನ್ಯರಿಗೆ ಸುಲಭ ಬೆಲೆಯಲ್ಲಿ ತಲುಪಿಸಬೇಕೆಂಬ ಉದ್ದೇಶ ಕನ್ನಡ ಪುಸ್ತಕ ಪ್ರಾಧಿಕಾರ ಹೊಂದಿದೆ.ಕನ್ನಡ ಪುಸ್ತಕ ಪ್ರಾಧಿಕಾರದ ಆನ್ ಲೈನ್ https://kpp.karnataka.gov.in (ಆನ್‌ಲೈನ್ ಪುಸ್ತಕ ಖರೀದಿಗೆ ವಿಭಾಗ ಇಲ್ಲಿ ವೀಕ್ಷಿಸಿ) ನಲ್ಲಿ ಕೂಡ ಈ ಶೇ.50 ರಿಯಾಯಿತಿ ಲಭ್ಯವಿದೆ.ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ದೂ.080-22107705) ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕಾರಿಪುರ: ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಶಿಕಾರಿಪುರ ಮೆಸ್ಕಾಂ ಉಪವಿಭಾಗ ಕಛೇರಿಯಲ್ಲಿ ನ. 04 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

# ಗ್ಯಾಸ್ಟ್ರಿಕ್ ಸಮಸ್ಯೆ"ಗೆ ಯೋಗ ಶಿಬಿರ

**ಶಿವಮೊಗ್ಗ:** ಕಣಾದ ಯೋಗ & ರಿಸರ್ಚ್ ಫೌಂಡೇಷನ್ (ರಿ) ಮತ್ತು

,ಯುವಸಬಲೀಕರಣ & ಕ್ರೀಡಾ ಇಲಾಖೆಯ

ಸಹಯೋಗದೊಂದಿಗೆ ಶಿವಮೊಗ್ಗದ ನೆಹರು ಕ್ರೀಡಾಂಗಣದಲ್ಲಿ ನವೆಂಬರ್ 3 ರ ಸೋಮವಾರದಿಂದ 13 ರವರೆಗೆ 10 ದಿನಗಳ ಕಾಲ "ಗ್ಯಾಸ್ಟ್ರಿಕ್ ಸಮಸ್ಯೆ"ಗೆ ಮತ್ತು ಸಹಜ ಆರೋಗ್ಯಕ್ಕಾಗಿ ಯೋಗ-ಪ್ರಾಣಾಯಾಮ-ಧ್ಯಾನ ಶಿಬಿರವನ್ನು

ಆಯೋಜಿಸಲಾಗಿದೆ. ಪ್ರತಿ ದಿನ ಬೆಳಿಗ್ಗೆ5:45 ರಿಂದ 7:15 ರವರೆಗೆ ನಡೆಯಲಿರುವ ಈ ಶಿಬಿರವನ್ನು ಅಂತರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಯೋಗಪಟು ಮತ್ತು ಯೋಗಾಚಾರ್ಯ ಅನಿಲ್ ಕುಮಾರ್. ಹೆಚ್.ಶೆಟ್ಟರ್ ರವರು ನಡೆಸಿಕೊಡಲಿದ್ದಾರೆ.ಸೀಮಿತ ಪ್ರವೇಶ ಇರುವ ಈ ಶಿಬಿರದಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತ ಪುರುಷ ಮಹಿಳೆಯರು

ಹೆಚ್ಚಿನ ವಿವರಗಳನ್ನು ಯೋಗಾಚಾರ್ಯ ಅನಿಲ್ ಕುಮಾರ್. ಹೆಚ್.ಶೆಟ್ಟರ್ 9886674375,



9916570686 ರವರಿಂದ ಪಡೆಯಬಹುದು.

# ಸಾರಿಗೆ ಇಲಾಖೆ: ವಿವಿಧ ಸೇವೆ ಆನ್‌ಲೈನ್‌ನಲ್ಲಿ ಲಭ್ಯ

**ಬಳ್ಳಾರಿ:** ಸಾರಿಗೆ ಇಲಾಖೆಯ ವಿವಿಧ ಸೇವೆಗಳು ಆನ್‌ಲೈನ್ ಗೆ ಒಳಪಡಿಸಿರುವುದರಿಂದ ಬಳ್ಳಾರಿ ಪ್ರಾದೇಶಿಕ ಸಾರಿಗೆ ಕಚೇರಿ ವ್ಯಾಪ್ತಿಯ ವಾಹನಗಳ ನೋಂದಣಿ, ವರ್ಗಾವಣೆ, ಲೈಸೆನ್ಸ್ ಮತ್ತು ಇತರೆ ಸೇವೆಗಳಿಗಾಗಿ ಎಂ-ಪರಿವಾಹನ್ ನಲ್ಲಿನ ವಾಹನ್-4, ಸಾರಥಿ-4 ತಂತ್ರಾಂಶದ ಮೂಲಕ ಪಡೆಯಬಹುದಾಗಿದೆ.

ಆನ್ ಲೈನ್ ನಲ್ಲಿ ವಿವಿಧ ಸೇವೆಗಳಿಗಾಗಿ ಅರ್ಜಿ ಸಲ್ಲಿಸಲು ಅಗತ್ಯ ದಾಖಲೆಗಳ ಅಪ್ ಲೋಡ್, ನಿಗದಿತ ಶುಲ್ಕ, ತೆರಿಗೆಗಳನ್ನು ಪಾವತಿಸಿ ಮತ್ತು ಮೂಲ ದಾಖಲೆಗಳ ಸಹಿತ ಅಪ್ ಲೋಡ್ ಮಾಡಿ ಮೂಲ ಪ್ರತಿಗಳನ್ನು ಕಚೇರಿಗೆ ಸಲ್ಲಿಸಬೇಕು. ಸಾರ್ವಜನಿಕರು ಯಾವುದೇ ಮಧ್ಯವರ್ತಿಗಳನ್ನಾಗಲಿ ಅಥವಾ ಅನ್ಯ ವ್ಯಕ್ತಿಗಳನ್ನಾಗಲೀ ಸಂಪರ್ಕಿಸಬಾರದು.

ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ಸಾರಿಗೆ ಕಚೇರಿಯ ಮುಖ್ಯಸ್ಥರು, ಅಧೀಕ್ಷಕರು ಹಾಗೂ ಇಲಾಖೆಉ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಬಳ್ಳಾರಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಬಿ.ಎಸ್.ಶ್ರೀನಿವಾಸಗಿರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೃಪ್ತಿ ಹೆಲ್ತ್ ಕ್ಲೀನಿಕ್ ಕಾರ್ಯವನ್ನು ಶ್ಲಾಘಿಸಿದ ಎಂಎಲ್‌ಸಿ ಬಲ್ಕಿಷ್ ಭಾನು



**ಶಿವಮೊಗ್ಗ :-** ಕಳೆದ ನಾಲ್ಕು ವಾರಗಳಿಂದ ಉಚಿತ ಆರೋಗ್ಯ ತಪಾಸಣೆ ನಡೆಸುತ್ತಿರುವ ನಗರದ ದುರ್ಗಿಗುಡಿಯ ಪ್ರತಿಷ್ಠಿತ ತೃಪ್ತಿ ಹೆಲ್ತ್ ಕ್ಲೀನಿಕ್‌ನಿಂದ ಈ ಬಾರಿ ಬೀದಿಬದಿ ವ್ಯಾಪಾರಿಗಳಿಗೆ ಉಚಿತ ತಪಾಸಣೆ ಯನ್ನು ಯಶಸ್ವಿಯಾಗಿ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಂಎಲ್‌ಸಿ ಬಲ್ಕಿಷ್ ಭಾನು, ತೃಪ್ತಿ ಆಸ್ಪತ್ರೆಯ ಸಂಸ್ಥಾಪಕ ಡಾ. ಚಂದ್ರಶೇಖರ್ ಅವರ ಸೇವೆ ನಿಜಕ್ಕೂ ಮೆಚ್ಚುವಂತಾದ್ದು, ಅವರ ಸೇವೆ ಹೀಗೆ ಮುಂದುವರೆಯಲಿ. ಜೊತೆಗೆ ಆರ್ಥಿಕವಾಗಿ ಹಿಂದುಳಿದ ಎಲ್ಲ ರಿಗೂ ಉಚಿತವಾಗಿ ಇವರ ಆಸ್ಪತ್ರೆಯಲ್ಲಿ ಯಶಸ್ವಿಯಾಗಿ ಆರೋಗ್ಯ ತಪಾಸಣೆ ನಡೆಯಲಿ ಎಂದು ಹಾರೈಸಿದರು.

ಚಿಕಿತ್ಸೆ ಪಡೆದ ವ್ಯಾಪಾರಿಗಳು ಸಂತಸ ವ್ಯಕ್ತಪಡಿಸಿ ಕೃತಜ್ಞತೆ ಸಲ್ಲಿಸಿದರು. ಆಸ್ಪತ್ರೆ ಸಂಸ್ಥಾಪಕ ಡಾ. ಚಂದ್ರಶೇಖರ್, ಬೀದಿಬದಿ ವ್ಯಾಪಾರಿಗಳ ಸಂಘದ ಅಧ್ಯಕ್ಷ ಮಣಿ, ಅಶೋಕ್ ಕುಮಾರ್ ಮತ್ತು ಜಮಿಯ ಮಸೀದಿ ಅಧ್ಯಕ್ಷ ಪರ್ವೀಜ್, ಪ್ರಮುಖರಾದ ಎಂ.ಡಿ. ಸರೀಫ್ ಹಾಗೂ ಮುಜೀಬ್ ಇನ್ನಿತರರಿದ್ದರು.

# ಹೊಳಲ್ಕೆರೆ ವಾಗ್ದೇವಿ ಪ್ರೌಢಶಾಲೆ ವಿದ್ಯಾರ್ಥಿಗಳು ವಿಜ್ಞಾನ ನಾಟಕ ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ



**ಚಿತ್ರದುರ್ಗ:** ಶಾಲಾ ಶಿಕ್ಷಣ ಇಲಾಖೆ, ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ವಿಶ್ವೇಶ್ವರಯ್ಯ ಕೈಗಾರಿಕೆ ಮತ್ತು ತಾಂತ್ರಿಕ ವಸ್ತು ಸಂಗ್ರಹಾಲಯ, ಬೆಂಗಳೂರು ಇವರ ಸಹಯೋಗದಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಜಿಲ್ಲಾ ಮಟ್ಟದ ವಿಜ್ಞಾನ ನಾಟಕ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾದ ಹೊಳಲ್ಕೆರೆ ಪಟ್ಟಣದ ವಾಗ್ದೇವಿ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಡಯಟ್‌ನ ಉಪ ಪ್ರಾಂಶುಪಾಲರಾದ ಎಸ್. ನಾಗಭೂಷಣ್ ಪ್ರಶಸ್ತಿ ಪತ್ರ ವಿತರಿಸಿದರು. ನೋಡಲ್ ಅಧಿಕಾರಿ ಶಿವಲೀಲ, ಉಪನ್ಯಾಸಕರಾದ ಎಸ್.ಬಸವರಾಜು, ರಾಮಣ್ಣ, ತೀರ್ಪುಗಾರರಾದ ದಾಸೇಗೌಡ, ಕೆ.ಆರ್.ಲೋಕೇಶ್, ನಾಗಭೂಷಣ್, ಮಧು ಮತ್ತಿತರರಿದ್ದರು.

# ನ.03 ರಂದು ಕುಷ್ಠರೋಗ ಪತ್ತೆ ಹಚ್ಚುವ ಆಂದೋಲನಾ ಸಮೀಕ್ಷೆ ಕಾರ್ಯಕ್ರಮ

**ಬಳ್ಳಾರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಹಾನಗರ ಪಾಲಿಕೆ, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ ವಿಭಾಗ ಹಾಗೂ ಮಿಲ್ಲರ್‌ಪೇಟೆ ನಗರ ಆರೋಗ್ಯ ಕೇಂದ್ರ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನ.03 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಮಿಲ್ಲರ್ ಪೇಟೆಯ ವಾರ್ಡ್ ನಂ.13 ರಲ್ಲಿ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ (ನ.03 ರಿಂದ ನ.19 ರವರೆಗೆ 14 ದಿನಗಳ ಕಾಲ) ಕುಷ್ಠರೋಗ ಪತ್ತೆ ಹಚ್ಚುವ ಅಂದೋಲನಾ ಸಮೀಕ್ಷೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಹಾನಗರ ಪಾಲಿಕೆಯ ಸದಸ್ಯ ಇಬ್ರಾಹಿಂಬಾಬು ಅವರು ಕಾರ್ಯಕ್ರಮ ಉದ್ಘಾಟಿಸುವರು.ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಕಾರ್ಯಕ್ರಮದ



ಅಧ್ಯಕ್ಷತೆ ವಹಿಸುವರು.ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಅವರು ಪ್ರಾಸ್ತಾವಿಕವಾಗಿ ಮಾತನಾಡುವರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ವಾರ್ತಾ ಮತ್ತೆ ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ತುಕಾರಾಂ ರಾವ್ ಬಿ.ವಿ., ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅನುಷ್ಠಾನ ಅಧಿಕಾರಿ ಡಾ.ಪೂರ್ಣಿಮ ಕಟ್ಟಿಮನಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಮಿಲ್ಲರ್ ಪೇಟೆಯ ವೈದ್ಯಾಧಿಕಾರಿಗಳಾದ ಡಾ.ನವೀನ್ ಕುಮಾರ್, ಡಾ.ಶೋಭ, ಡಾ.ಹರೀಶ್ ಸೇರಿದಂತೆ ಇತರರು ಮುಖ್ಯ ಅಥಿಗಳಾಗಿ ಭಾಗವಹಿಸುವರು.

ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್ ಸ್ವಾಗತ ಮತ್ತು ನಿರೂಪಣೆ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

# ಕನ್ನಡ ರಾಜ್ಯೋತ್ಸವದ ಪ್ರಯುಕ್ತ ಮೆರವಣಿಗೆ

**ರಾಮನಗರ:** 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ಬೆಂಗಳೂರು ದಕ್ಷಿಣ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನ.01ರಂದು ಬೆಳಿಗೆ 7 ಗಂಟೆಗೆ ಕೆಂಗಲ್ ಹನುಮಂತಯ್ಯ ಪ್ರತಿಮೆ, ಹಳೆ ಬಸ್‌ಸ್ಟಾಂಡ್, ಕನಕಪುರ ಸರ್ಕಲ್, ರಾಮನಗರ ಟೌನ್‌ನಿಂದ ಜಿಲ್ಲಾ ಕ್ರೀಡಾಂಗಣದ ವರೆಗೆ ಮೆರವಣಿಗೆ ಕಾರ್ಯಕ್ರಮ ಆಯೋಜಿಸಲಾಗಿದೆ ಹಾಗೂ ಬೆಳಿಗ್ಗೆ 8.30ಕ್ಕೆ ಜಿಲ್ಲಾ ಮಟ್ಟದ ಕನ್ನಡ ರಾಜ್ಯೋತ್ಸವದ ವೇದಿಕೆ ಕಾರ್ಯಕ್ರಮವನ್ನು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ.ಜಿಲ್ಲೆಯ ಎಲ್ಲಾ ಕನ್ನಡ ಪರ ಸಂಘಟನೆಯ ಸದಸ್ಯರು, ಜಿಲ್ಲಾ ಕನ್ನಡ ಜಾಗೃತಿ ಸಮಿತಿ ಸದಸ್ಯರು, ಎಲ್ಲಾ ಸಮುದಾಯದ ಅಧ್ಯಕ್ಷರು, ಕಾರ್ಯದರ್ಶಿಗಳು, ಮುಖಂಡರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು, ಸಿಬ್ಬಂದಿಗಳು ಕಡ್ಡಾಯವಾಗಿ ತಪ್ಪದೇ ಭಾಗವಹಿಸಿ 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 70ನೇ ಕನ್ನಡ ರಾಜ್ಯೋತ್ಸವ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಚಿಕ್ಕಬಳ್ಳಾಪುರ ವತಿಯಿಂದ 70ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ನವೆಂಬರ್ 1 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಸರ್. ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.ಧ್ವಜಾರೋಹಣವನ್ನು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ರವರು ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಪ್ರದೀಪ್ ಈಶ್ವರ್ ರವರು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ.ಮಲ್ಲೇಶ್ ಬಾಬು, ಶಾಸಕರುಗಳಾದ ಎಸ್.ಎನ್. ಸುಬ್ಬಾರೆಡ್ಡಿ, ಬಿ.ಎನ್. ರವಿಕುಮಾರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ವಿಧಾನ ಪರಿಷತ್ತು ಶಾಸಕರಾದ ಚಿದಾನಂದ ಎಂ. ಗೌಡ, ಎಂ.ಎಲ್. ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ, ಡಾ. ಹೆಚ್.ನರಸಿಂಹಯ್ಯ ವಿಜ್ಞಾನ ಶೈಕ್ಷಣಿಕ ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್.ಹೆಚ್ ಶಿವಶಂಕರರೆಡ್ಡಿ, ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಕೇಶವರೆಡ್ಡಿ, ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಯಲುವಹಳ್ಳಿ ಎನ್. ರಮೇಶ್, ಚಿಕ್ಕಬಳ್ಳಾಪುರ ನಗರಸಭೆ ಅಧ್ಯಕ್ಷ ಎ.ಗಜೇಂದ್ರ ರವರು ಭಾಗವಹಿಸಲಿದ್ದಾರೆ. ಅತಿಥಿಗ'ಳಾಗಿ ವಿದ್ಯುನ್ಮಾನ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳಾದ ಡಾ. ಎನ್. ಮಂಜುಳ ರವರು ಭಾಗವಹಿಸುವರು.

## ಕರ್ನಾಟಕ ರಾಜ್ಯ ಪ್ರದೇಶ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ಘಟಕದ ಕಾರ್ಯಕಾರಿಣೆ ಸದಸ್ಯರಾಗಿ ಎಲ್.ಟಿ ಹೇಮಣ್ಣ ಹಾಗೂ ಕೆ.ರಾಜಕುಮಾರ್ ನೇಮಕ



**ಚಿಕ್ಕಮಗಳೂರು:** ಕರ್ನಾಟಕ ರಾಜ್ಯ ಪ್ರದೇಶ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ಘಟಕದ ಕಾರ್ಯಕಾರಿಣಿ ಸದಸ್ಯರಾಗಿ ಎಲ್.ಟಿ ಹೇಮಣ್ಣ ಹಾಗೂ ಕೆ.ರಾಜಕುಮಾರ್ ನೇಮಕ ವಾಗಿದ್ದಾರೆ. ಅಖಿಲ ಭಾರತ

ರಾಷ್ಟ್ರೀಯ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಖರ್ಗೆ, ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಪರಿಶಿಷ್ಟ ಜಾತಿ ಸಮಿತಿಯ ಅಧ್ಯಕ್ಷರಾದ ರಾಜೇಂದ್ರಪಾಲ್ ಗೌತಮ್, ರಾಜ್ಯ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಶ್ರೀ ಡಿ.ಕೆ.ಶಿವಕುಮಾರ್, ರಾಜ್ಯ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ಘಟಕದ ಅಧ್ಯಕ್ಷರಾದ ಶ್ರೀ ಆರ್.ಧರ್ಮಸೇನ, ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ

ಶ್ರೀ ಅಂಶುಮಂತ್ ಹಾಗೂ ಜಿಲ್ಲಾ ಕಾಂಗ್ರೆಸ್ ಸಮಿತಿ ಪರಿಶಿಷ್ಟ ಜಾತಿ ಘಟಕ ಅಧ್ಯಕ್ಷರಾದ ಶ್ರೀ ಎಂ.ಮಲ್ಲೇಶ್ ಸ್ವಾಮಿ , ಜಿಲ್ಲೆಯ ಎಲ್ಲಾ ಶಾಸಕರು ಹಾಗೂ ಸಹಕರಿಸಿದ ಪಕ್ಷದ ಎಲ್ಲಾ ಮುಖಂಡರಿಗೆ ನೂತನ ಸದ್ಯಸರು ಅಭಿನಂದನೆಗಳು ಸಲ್ಲಿಸಿದ್ದಾರೆ.

## ಹಾವುಕಡಿತ ಚಿಕಿತ್ಸೆಯಲ್ಲಿ ವೈದ್ಯರ ನಿರ್ಲಕ್ಷ್ಯ ಸಲ್ಲದು

**ಶಿವಮೊಗ್ಗ :** ಅನೇಕ ಹಾವು ಕಡಿತ ಪ್ರಕರಣಗಳಲ್ಲಿ ಚಿಕಿತ್ಸಾಲಯಗಳಲ್ಲಿ ಕರ್ತವ್ಯದ ಅವಧಿಯಲ್ಲಿ ವೈದ್ಯರಿಲ್ಲದಿರುವುದು, ವೈದ್ಯರ ನಿರ್ಲಕ್ಷ್ಯ ವಹಿಸಿರುವುದು ಕಂಡುಬಂದಿದ್ದು, ಅದನ್ನು ಅಮೂಲಾಗ್ರವಾಗಿ ಪರಿಶೀಲಿಸಿ, ವಿಸ್ತೃತ ವರದಿ ನೀಡುವಂತೆ ಜಿಲ್ಲಾಧಿಕಾರಿ ಗುರುದತ್ತಹೆಗಡೆ ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಚಿಸಿದರು.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಸೇವಾ ಅವಧಿಯಲ್ಲಿ ವೈದ್ಯರ ನಿರ್ಲಕ್ಷ್ಯವನ್ನು ಸಹಿಸಿಕೊಳ್ಳಲಾಗದು ಎಂದ ಅವರು ಸೇವೆಯಲ್ಲಿ ಲೋಪ ಕಂಡುಬಂದಲ್ಲಿ ಅಂತಹ ವೈದ್ಯಾಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಅನಿವಾರ್ಯವಾಗಲಿದೆ ಎಂದವರು ನುಡಿದರು.

ಯಾವುದೇ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸೇವಾನಿತರ ವೈದ್ಯರು ರಜೆಯ ಮೇಲೆ ತೆರಳಿದ್ದಾಗ ಆ ಸ್ಥಳಕ್ಕೆ ಪರ್ಯಾಯ ವೈದ್ಯರನ್ನು ನಿಯೋಜಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಿದ ಅವರು, ನಗರದ ಸಂಪರ್ಕದಿಂದ ದೂರವಿರುವ ಗ್ರಾಮಗಳಲ್ಲಿ ಸಂಭವಿಸಬಹುದಾದ ಹಾವು ಕಡಿತ ಪ್ರಕರಣಗಳಿಗೆ ತಕ್ಷಣದ ಚಿಕಿತ್ಸೆಗೆ ಕೈಗೊಳ್ಳಬಹುದಾದ ಪರ್ಯಾಯ ಕ್ರಮಗಳ ಬಗ್ಗೆಯೂ ಜಿಲ್ಲಾ ವೈದ್ಯಾಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ಅಧೀನ ವೈದ್ಯಾಧಿಕಾರಿಗಳಿಗೆ ನಿರ್ದೇಶನ ನೀಡುವಂತೆ ಅವರು ಸೂಚಿಸಿದರು.

ಹೊಸನಗರ ತಾಲೂಕಿನ ಮತ್ತೂರಿನಲ್ಲಿನ ಹಾವು ಕಡಿತ ವ್ಯಕ್ತಿಯ ಚಿಕಿತ್ಸೆಗಾಗಿ 108 ವಾಹನದ ಸಿಬ್ಬಂದಿಗೆ ಕರೆಮಾಡಿದಾಗಿ ಕರೆಯನ್ನು ನಿರ್ಲಕ್ಷ್ಯ ಮಾಡಿದ್ದಲ್ಲದೆ ಅಮೂಲ್ಯ ಜೀವ ಉಳಿಸುವಲ್ಲಿ ತೋರಿದ ಅಸಹಕಾರಕ್ಕಾಗಿ ಅವರ ವಿರುದ್ಧ ದೂರು ದಾಖಲಿಸುವಂತೆ ಸೂಚಿಸಿದ ಅವರು, ತುರ್ತು ಸಂದರ್ಭದಲ್ಲಿ ವೈದ್ಯರು ಜವಾಬ್ದಾರಿಯರಿತು ಕಾರ್ಯನಿರ್ವಹಿಸಬೇಕು. ಮರಣಶೈಯ್ಯೆಯಲ್ಲಿರುವಾಗ ವೈದ್ಯ ಸಿಬ್ಬಂಧಿ ಚಿಕಿತ್ಸೆಗೆ ಧಾವಿಸಿ, ಅಮೂಲ್ಯ ಜೀವ ಉಳಿಸುವಲ್ಲಿ ಶ್ರಮಿಸಬೇಕು. ವಿಶೇಷವಾಗಿ ಹಾವು ಕಡಿತ ಪ್ರಕರಣಗಳಲ್ಲಿ ವೈದ್ಯರು ತುರ್ತು ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.

ರೋಗಿಯು ಯಾವುದೇ ಪರಿಸ್ಥಿತಿ, ಸಂದರ್ಭ, ಆತಂಕದಲ್ಲಿದ್ದರೂ ವೈದ್ಯರು ತಕ್ಷಣದ ಚಿಕಿತ್ಸಾ ಕ್ರಮಕ್ಕೆ ಮುಂದಾಗಬೇಕು. ಶಿಕಾರಿಪುರ ತಾಲೂಕಿನ ಹರಿಗೆಯಲ್ಲಿ ಮೃತ ವ್ಯಕ್ತಿಯ ಕುರಿತು ಕೂಡಲೇ ವರದಿ ನೀಡುವಂತೆಯೂ ಅವರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಸೂಚಿಸಿದ ಅವರು ಹಾವು ಕಡಿತ ಪ್ರಕರಣಗಳಲ್ಲಿ ನಾಟಿ ವೈದ್ಯರು ಚಿಕಿತ್ಸೆ ನೀಡಬಾರದು. ನೀಡಿದ್ದಲ್ಲಿ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಯುವಜನರಲ್ಲಿ ತಂಬಾಕು ಬಳಕೆಯನ್ನು ನಿಯಂತ್ರಿಸಲು, ವಿಶ್ವ ತಂಬಾಕು ಮುಕ್ತ ಯುವ ಅಭಿಯಾನವನ್ನು ಪ್ರಾರಂಭಿಸಿದೆ. ಈ ಅವಧಿಯಲ್ಲಿ ಜಿಲ್ಲೆಯ ಸುಮಾರು 1000ಕ್ಕೂ ಹೆಚ್ಚಿನ ಶಾಲೆಗಳಲ್ಲಿ ತಂಬಾಕು ಉತ್ಪನ್ನಗಳ ಬಳಕೆಯಿಂದಾಗುವ ಪರಿಣಾಮಗಳ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದ ಅವರು, ಸಮೀಪದ ಆರೋಗ್ಯ ಕೇಂದ್ರಗಳಲ್ಲಿನ ವೈದ್ಯರನ್ನು ಕರೆಸಿ, ಉಪನ್ಯಾಸ ಹಾಗೂ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವಂತೆ ಸೂಚಿಸಿದರು.

ಮಂಗನ ಸಾವು ಕಂಡುಬರುವ ಪ್ರದೇಶದಲ್ಲಿ ಓಡಾಟ ನಡೆಸದಂತೆ ಸೂಚನೆ ನೀಡುವ ಮೂಲಕ ನಿಯಂತ್ರಣ ಕ್ರಮಗಳನ್ನು ಅನುಸರಿಸಬೇಕು. ಈ ಸಂಬಂಧ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾಹಿತಿ ನೀಡುವಂತೆ ಸೂಚಿಸಿದರು.

ಶಿವಮೊಗ್ಗದ ವಿವಿಧ ರಕ್ತನಿಧಿ ಕೇಂದ್ರಗಳಲ್ಲಿ ಸಂಗ್ರಹಿಸಲಾಗುವ ರಕ್ತವನ್ನು ನೆರೆಯ ಜಿಲ್ಲೆಗಳಿಗೆ ರವಾನಿಸುತ್ತಿರುವ ಬಗ್ಗೆ ಮಾಹಿತಿ ಇದೆ. ಜಿಲ್ಲೆಯ ರೋಗಿಗೆಳ ಅಗತ್ಯಕ್ಕೆ ತಕ್ಕಂತೆ ರಕ್ತವನ್ನು ನೀಡಿ ಸಹಕರಿಸಬೇಕು. ಅನಗತ್ಯವಾಗಿ ಬೇರೆ ಜಿಲ್ಲೆಗಳಿಗೆ ರಕ್ತ ಸರಬರಾಜು ಮಾಡುವುದನ್ನು ನಿಯಂತ್ರಿಸಬೇಕು ಎಂದವರು ತಾಕೀತು ಮಾಡಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯಾದ್ಯಂತ ನಡೆಯುತ್ತಿರುವ ಕುಷ್ಟರೋಗ ಪತ್ತೆ ಅಭಿಯಾನ, ರೇಬಿಸ್‌ಪ್ರಥಮ ಚಿಕಿತ್ಸೆ ಹಾಗೂ ತಂಬಾಕು ಮುಕ್ತ ಅಭಿಯಾನದ ಕುರಿತು ಬಿತ್ತಿಪತ್ರವನ್ನು ಮಾನ್ಯ ಜಿಲ್ಲಾಧಿಕಾರಿಗಳು ಬಿಡುಗಡೆಗೊಳಿಸಿದರು.

ಈ ಸಂದರ್ಭದಲ್ಲಿ ಪ್ರೊಬೇಷನರ್ ಐಎಎಸ್ ಅಧಿಕಾರಿ ನಾಗೇಂದ್ರಬಾಬು, ಹೆಚ್ಚುವರಿ ಪೊಲೀಸ್‌ಅಧೀಕ್ಷಕ ರಮೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ॥ ನಟರಾಜ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ॥ ನಾಗರಾಜನಾಯ್ಕ್‌ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಿರುಗುಪ್ಪ: ಬೀಜದ ಕಿಟ್ ಪಡೆಯಲು ಅರ್ಜಿ ಆಹ್ವಾನ

**ಬಳ್ಳಾರಿ:** ಸಿರುಗುಪ್ಪ ತೋಟಗಾರಿಕೆ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಕೆ.ಕೆ.ಆರ್.ಡಿ.ಬಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದವರಿಗೆ ತರಕಾರಿ ಬೀಜದ ಕಿಟ್ ವಿತರಣೆ ಮಾಡಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿಯ ಭೌತಿಕ 200 ಫಲಾನುಭವಿಗಳಿಗೆ ಆರ್ಥಿಕ ರೂ.10 ಲಕ್ಷ ಮತ್ತು ಪರಿಶಿಷ್ಟ ಪಂಗಡದ ಭೌತಿಕ 800 ಫಲಾನುಭವಿಗಳಿಗೆ ಆರ್ಥಿಕ ರೂ.40 ಲಕ್ಷ ಇದೆ.

ಆಸಕ್ತ ರೈತರು ಪ್ರಸಕ್ತ ಸಾಲಿನ ಪಹಣಿ, ಬ್ಯಾಂಕ್ ಖಾತೆಯ ಪುಸ್ತಕ, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ಗಳೊಂದಿಗೆ ನವೆಂಬರ್ 15 ರೊಳಗಾಗಿ ಆಯಾ ಹೋಬಳಿಯ ಅಧಿಕಾರಿಗಳಿಗೆ ಅಥವಾ ಸಿರುಗುಪ್ಪ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಸಿರುಗುಪ್ಪ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಮಹೇಶ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.06 ರಂದು ಜಿಲ್ಲಾ ಮೇಲ್ವಿಚಾರಣಾ ಸಮಿತಿ ಸಭೆ

**ಬಳ್ಳಾರಿ:** ಕರ್ನಾಟಕ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ–2013ರ ಸೆಕ್ಷನ್–11ರ ಪ್ರಕಾರ ಜಿಲ್ಲಾ ಮೇಲ್ವಿಚಾರಣಾ ಸಮಿತಿ ರಚಿಸಿದ್ದು, ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ನ.06 ರಂದು ಮಧ್ಯಾಹ್ನ 03 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಎಸ್.ಸಿ.ಎಸ್.ಪಿ./ಟಿ.ಎಸ್.ಪಿ ಜಿಲ್ಲಾ ಮೇಲ್ವಿಚಾರಣಾ ಸಮಿತಿಯ ಸಭೆ ಏರ್ಪಡಿಸಲಾಗಿದೆ.

ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಅಗತ್ಯ ಮಾಹಿತಿಗಳೊಂದಿಗೆ ಸಭೆಗೆ ಹಾಜರಾಗಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವಜನರು ರಕ್ತದಾನದಲ್ಲಿ ಆಸಕ್ತಿ ವಹಿಸಬೇಕು



**ಚಿಕ್ಕಮಗಳೂರು:** ರಕ್ತದಾನದಿಂದ ಮತ್ತೊಬ್ಬರ ಜೀವ ಉಳಿಸಬಹುದಾಗಿದ್ದು ಯುವಜನರು ಆಸಕ್ತಿ ವಹಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ವಿ.ಹನುಮಂತಪ್ಪ ಕಿವಿಮಾತು ಹೇಳಿದರು.

ನಗರದ ಐಡಿಎಸ್‌ಜಿ ಸರ್ಕಾರಿ ಕಾಲೇಜಿನಲ್ಲಿ ರಾಜ್ಯ ಏಡ್ಸ್ ನಿಯಂತ್ರಣ ಸಂಸ್ಥೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೈದ್ಯಕೀಯ ವಿಜ್ಞಾನಗಳ ಬೋಧನಾ ಆಸ್ಪತ್ರೆ, ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕ, ರೆಡ್ ರಿಬ್ಬನ್ ಕ್ಲಬ್, ಎನ್‌ಎಸ್‌ಎಸ್ ಘಟಕ, ಯೂತ್ ರೆಡ್ ಕ್ರಾಸ್, ಐಡಿಎಸ್‌ಜಿ ಸರ್ಕಾರಿ ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸ್ವಯಂ ಪ್ರೇರಿತ ರಕ್ತದಾನ ದಿನ ಹಾಗೂ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಯುವಜನತೆ ದುಶ್ಚಟಗಳಿಗೆ ಒಳಗಾಗದೆ ಆರೋಗ್ಯ ಕಾಪಾಡಿಕೊಂಡಲ್ಲಿ ಪುರುಷರು ಪ್ರತೀ 3 ತಿಂಗಳಿಗೊಮ್ಮೆ, ಮಹಿಳೆಯರು ಪ್ರತೀ 4 ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು ಎಂದರಲ್ಲದೆ, ತಮ್ಮ ಇಲಾಖೆಯ ವತಿಯಿಂದ ಜಿಲ್ಲಾ ನ್ಯಾಯಾಲಯದಲ್ಲಿ ಸಹ ರಕ್ತದಾನ ಶಿಬಿರಗಳನ್ನು ಹಮ್ಮಿಕೊಳ್ಳಲಿದ್ದು ಮುಂದೆ ನಿರಂತರವಾಗಿ ರಕ್ತದಾನ ಮಾಡಲು ದಾನಿಗಳನ್ನು ಪ್ರೇರೇಪಿಸಲಾಗುವುದು ಎಂದರು,

ಜಿಲ್ಲಾ ಆಸ್ಪತ್ರೆಯ ರಕ್ತ ಕೇಂದ್ರದ ವೈದ್ಯಾಧಿಕಾರಿ ಡಾ.ಮೊಹಮ್ಮದ್ ಅಫ್ರೋಜ್ ಅಹಮ್ಮದ್ ಪ್ರಾಸ್ತಾವಿಕ ಮಾತನಾಡಿ, ಒಬ್ಬರು ದಾನ ಮಾಡಿದ ರಕ್ತದಿಂದ ಅವಶ್ಯಕತೆ ಇರುವ ಮೂವರು ರೋಗಿಗಳಿಗೆ ಪ್ರಯೋಜನವಾಗುತ್ತದೆ. ರಕ್ತವನ್ನು ನೀಡುವ ಮೊದಲು ಪರೀಕ್ಷೆಗಳನ್ನು ನಡೆಸಿದ ಬಳಿಕ ರಕ್ತವನ್ನು ಸಂಗ್ರಹಿಸಲಾಗುತ್ತದೆ. ಇಂದು ರಕ್ತದ ಅವಶ್ಯಕತೆ ತುಂಬ ಇದ್ದು 18 ವರ್ಷ ತುಂಬಿದ ಪ್ರತಿಯೊಬ್ಬರೂ ರಕ್ತದಾನ ಮಾಡುವಂತೆ ಮತ್ತು ಪ್ರತಿಯೊಬ್ಬರೂ ತಮ್ಮ ಹಾಗೂ ತಮ್ಮ ಮನೆಯಲ್ಲಿರುವವರ ರಕ್ತದ ಗುಂಪು ಬಗ್ಗೆ ತಿಳಿದುಕೊಂಡು ರಕ್ತದಾನ ಮಾಡುವುದು ಮತ್ತು ರಕ್ತದಾನಕ್ಕೆ ಪ್ರೇರೇಪಿಸುವಂತೆ ಕೋರಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬೇಬಿ ಅವರು ರಕ್ತದಾನ ಕುರಿತಾದ ಪ್ರಮಾಣ ವಚನ ಬೋಧಿಸಿದರು. ಇದೇ ವೇಳೆ ಅತೀ ಹೆಚ್ಚು ಬಾರಿ ರಕ್ತದಾನ ಮಾಡಿದ ದಾನಿಗಳಿಗೆ ಹಾಗೂ ಸಂಘ ಸಂಸ್ಥೆಗಳಿಗೆ ಇಲಾಖೆಯ ವತಿಯಿಂದ ನೆನಪಿನ ಕಾಣಿಕೆ ಮತ್ತು ಪ್ರಮಾಣ ಪತ್ರವನ್ನು ಜಿಲ್ಲಾ ಐಸಿಟಿಸಿ ಮೇಲ್ವಿಚಾರಕ ಆರ್.ಪ್ರಭುಕುಮಾರ್ ವಿತರಿಸಿದರು.

ಅಧ್ಯಕ್ಷತೆ ವಹಿಸಿದ್ದ ಐಡಿಎಸ್‌ಜಿ ಸರ್ಕಾರಿ ಕಾಲೇಜಿನ ಪ್ರಾಂಶುಪಾಲರಾದ ತಸ್ನೀಮ್ ಕೌಸರ್ ಮಣಿಯಾರ್ ಮಾತನಾಡಿ, ಇಂದಿನ ಯುವಕರು ರಕ್ತದಾನ ಮಾಡುವಂತೆ ಪ್ರೇರೇಪಣೆಯ ನುಡಿಯಾಡಿದರು. ಪ್ರತಿಯೊಬ್ಬರೂ ರಕ್ತದಾನ ಮಾಡುವುದರಲ್ಲದೆ, ತಮ್ಮ ಸ್ನೇಹಿತರನ್ನು ರಕ್ತದಾನಕ್ಕೆ ಉತ್ತೇಜಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯಕ್ರಮಾಧಿಕಾರಿ ಡಾ.ಹರೀಶ್ ಬಾಬು, ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಶಶಿಕಲಾ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಸೀಮಾ, ಕಾಲೇಜಿನ ಉಪನ್ಯಾಸಕ ವರ್ಗದವರು ಭಾಗವಹಿಸಿದ್ದರು. ಪಿಪಿಎಮ್ ಸಂಯೋಜಕ ಕಿರಣ್‌ಕುಮಾರ್ ವಂದಿಸಿದರು.

## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಕಳೆದ ಮಾರ್ಚ್ ಏಪ್ರಿಲ್‌ನಲ್ಲಿ ನಡೆದ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಶೇ.90 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮತ್ತು ವಿದ್ಯಾರ್ಥಿ ವೇತನ ನೀಡಲು ನ.15 ರೊಳಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಕುರುಹಿನ ಶೆಟ್ಟಿ ಮಹಿಳಾ ಸಂಘದ ಅಧ್ಯಕ್ಷೆ ಸಿ.ಎಸ್ ಪುಷ್ಪರಾಜೇಂದ್ರ ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಪ್ರೋತ್ಸಾಹಧನ ಮತ್ತು ವಿದ್ಯಾರ್ಥಿವೇತನ ನೀಡಲು ಕುರುಹಿನ ಶೆಟ್ಟಿ ಮಹಿಳಾ ಸಂಘದ ಜೊತೆಗೆ ಶ್ರೀ ನೀಲಕಂಠೇಶ್ವರ ಮಹಿಳಾ ಸಂಘ ಸಹಯೋಗದಲ್ಲಿ ನಿರ್ಧರಿಸಲಾಗಿದ್ದು, ನವೆಂಬರ್ ತಿಂಗಳಲ್ಲಿ ನೀಡುವ ವಿದ್ಯಾರ್ಥಿವೇತನ ವಿತರಣೆಗೆ ಅರ್ಹ ವಿದ್ಯಾರ್ಥಿಗಳಿಂದ ಭರ್ತಿಮಾಡಿದ ಅರ್ಜಿಗಳನ್ನು ಸಂಘದ ಕಚೇರಿಗೆ ನವೆಂಬರ್ 15 ರೊಳಗೆ ಸಲ್ಲಿಸುವಂತೆ ಮನವಿ ಮಾಡಿದ್ದಾರೆ.

ಅರ್ಜಿ ಫಾರಂಗಳು ಸಂಘದ ಕಚೇರಿಗಳಲ್ಲಿ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿದ್ದು, ಜಿಲ್ಲಾ ಕುರುಹಿನ ಬಳಗ ಅಥವಾ ಕುರುಹಿನ ಶೆಟ್ಟಿ ಬ್ರಿಗೇಡ್ ವಾಟ್ಸಾಪ್ ಗ್ರೂಪ್‌ನಿಂದ ಅರ್ಜಿ ಫಾರಂನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದ್ದು, ಹೆಚ್ಚಿನ ವಿವರಗಳಿಗೆ 8760501774, 9482562089, 9448703156, 8618951862 ಈ ಮೊಬೈಲ್ ಸಂಖ್ಯೆಗಳನ್ನು ಸಂಪರ್ಕಿಸಬೇಕೆಂದು ವಿನಂತಿಸಿದ್ದಾರೆ.

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆ

**ಚಿಕ್ಕಮಗಳೂರು:** ಜಿಲ್ಲೆಯ ಚಿಕ್ಕಮಗಳೂರು ತರೀಕೆರೆ ಮತ್ತು ನ.ರಾ.ಪುರ ತಾಲ್ಲೂಕುಗಳಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಗೌರವಧನದ ಆಧಾರದ ಮೇಲೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ವಿಕಲಚೇತನರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸಬಯಸುವವರು ಆಯಾ ತಾಲ್ಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಪಡೆದ ಅರ್ಜಿಯನ್ನು ಭರ್ತಿ ಮಾಡಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಪ್ರತಿ, ವಾಸಸ್ಥಳ ದೃಢೀಕರಣ ಪತ್ರ, ವಿಶಿಷ್ಟ ಗುರುತಿನ ಚೀಟಿ (ಯು.ಡಿ.ಐ.ಡಿ ಕಾರ್ಡ್), ಆಧಾರ್ ಕಾರ್ಡ್ ಪ್ರತಿ, ಜಾತಿ ಮತ್ತು ಆದಾಯ ದೃಢೀಕರಣ ಪತ್ರ, ಪಡಿತರ ಚೀಟಿಗಳ ಜೆರಾಕ್ಸ್ ಪ್ರತಿ ಮತ್ತು ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರಗಳನ್ನು ಲಗತ್ತಿಸಿ ನವೆಂಬರ್ 27 ರೊಳಗೆ ಸಲ್ಲಿಸುವಂತೆ ಕೋರಲಾಗಿದೆ.

## ರಾಷ್ಟ್ರೀಯ ಐಕ್ಯತೆ ಸಾರಿದ ದೇಶ ನಮ್ಮದು

**ಬಳ್ಳಾರಿ:** ಭಾರತವು ವಿವಿಧತೆಯಲ್ಲಿ ಏಕತೆ ಹೊಂದಿದ ರಾಷ್ಟ್ರವಾಗಿದ್ದು, ಪ್ರಪಂಚದಾದ್ಯಂತ ರಾಷ್ಟ್ರೀಯ ಐಕ್ಯತೆ ಸಾರಿದ ದೇಶ ನಮ್ಮದಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ ಅವರು ಹೇಳಿದರು.

ರಾಷ್ಟ್ರೀಯ ಐಕ್ಯತಾ ದಿನಾಚರಣೆ ಅಂಗವಾಗಿ ಸ್ವಾತಂತ್ರ ಹೋರಾಟಗಾರ, ಏಕೀಕರಣದ ಶಿಲ್ಪಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮದಿನದ ವಾರ್ಷಿಕೋತ್ಸವದ ನಿಮಿತ್ತ ಸಾರ್ವಜನಿಕರಲ್ಲಿ ನಾಗರಿಕರ ಸುರಕ್ಷತೆ ಮತ್ತು ಜವಾಬ್ದಾರಿಗಳ ಕುರಿತು ಅರಿವು ಮೂಡಿಸಲು ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಗರದ ಡಿಎಆರ್ ಪೊಲೀಸ್ ಕವಾಯತು ಮೈದಾನದಲ್ಲಿ ರನ್–ಫಾರ್–ಯುನಿಟಿ (ಏಕತೆಗಾಗಿ ಓಟ) ಮ್ಯಾರಥಾನ್ ಓಟ ಕಾರ್ಯಕ್ರಮಕ್ಕೆ ಶುಕ್ರವಾರ ಚಾಲನೆ ನೀಡಿ ಅವರು ಮಾತನಾಡಿದರು.




ಅಖಂಡ ಭಾರತ ಒಗ್ಗೂಡುವಿಕೆಗೆ ಕಾರಣೀಭೂತರಾದ ಉಕ್ಕಿನ ಮನುಷ್ಯ ಎಂದೇ ಖ್ಯಾತಿ ಪಡೆದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಸೇವೆ ಅಪಾರವಾಗಿದೆ. ಭಾರತ ದೇಶವು ಸ್ವಾತಂತ್ರ ದ ನಂತರ ಎಲ್ಲಾ ರಾಜ್ಯಗಳನ್ನು ವಿಲೀನಗೊಳಿಸಲು ಹಾಗೂ ಒಕ್ಕೂಟ ವ್ಯವಸ್ಥೆಯನ್ನು ಒಟ್ಟುಗೂಡಿಸಲು ಸಾಕಷ್ಟು ಶ್ರಮಿಸಿದ್ದರು ಎಂದು ತಿಳಿಸಿದರು.

ಭಾರತದಲ್ಲಿ 565 ಕ್ಕೂ ಹೆಚ್ಚು ರಾಜಪ್ರಭುತ್ವದ ಸಂಸ್ಥಾನಗಳನ್ನು ಒಟ್ಟುಗೂಡಿಸಿ ಒಂದೇ ಒಕ್ಕೂಟ ವ್ಯವಸ್ಥೆಯನ್ನು ರಚಿಸಿದರು. ಸರ್ದಾರ್ ವಲ್ಲಭಭಾಯಿ ಪಟೇಲ್ ಉಕ್ಕಿನಂತಹ ದೃಢತೆಯೇ ದೇಶದ ಏಕತೆಗೆ ಕಾರಣವಾಗಿದೆ. ರಾಜಿ ಸಂಧಾನ ಮತ್ತು ಮಿಲಿಟರಿ ಪೋರ್ಸ್ಗಳ ಮೂಲಕ ಏಕತೆಯನ್ನು ಮೂಡಿಸಿದರು. ಹಾಗಾಗಿ ಸ್ವತಂತ್ರ ಭಾರತದ ಮೊದಲ ಉಪಪ್ರಧಾನಿ ಮತ್ತು ಗೃಹ ಸಚಿವರಾದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಗೌರವಾರ್ಥವಾಗಿ ಅಕ್ಟೋಬರ್ 31 ರಂದು 'ರಾಷ್ಟ್ರೀಯ ಏಕತಾ ದಿವಸ' ವನ್ನಾಗಿ ಆಚರಿಸಲಾಗುತ್ತದೆ ಎಂದರು.

ಸಾರ್ವಜನಿಕರು ಆನ್ ಲೈನ್ ವಂಚನೆಗಳಿಗೆ ಹೆಚ್ಚಾಗಿ ಬಲಿಯಾಗುತ್ತಿದ್ದು, ಯಾರಾದರೂ ಅಪರಿಚಿತ ವ್ಯಕ್ತಿಗಳು ಕರೆ ಮಾಡಿ ವೈಯಕ್ತಿಕ ಮಾಹಿತಿ ಕೇಳಿದರೆ ಉತ್ತರಿಸಬಾರದು. ಯುವ ಸಮುದಾಯ ಮಾದಕ ವಸ್ತುಗಳಿಂದ ದೂರವಿರಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಪ್ರಸ್ತುತದಲ್ಲಿ ಯುವ ಸಮುದಾಯ ಆನ್‌ಲೈನ್ ಗೇಮ್, ಆನ್ ಲೈನ್ ವಂಚನೆಗಳಿಂದ ದೂರವಿರಬೇಕು. ಮೊಬೈಲ್ ನಲ್ಲಿ ಬರುವ ಯಾವುದೇ ರೀತಿಯ ಗೊತ್ತಿರದ ಫೈಲ್‌ಗಳ ಮೇಲೆ ಕ್ಲಿಕ್ ಮಾಡಬಾರದು. ಇದರಿಂದ ಸೈಬರ್ ವಂಚನೆಗೆ ಒಳಗಾಗುವ ಸಾಧ್ಯತೆ ಹೆಚ್ಚು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾದಕ ವಸ್ತುಗಳಿಂದ ದೂರ ಉಳಿಯುತ್ತೇನೆ, ಸಂಚಾರಿ ನಿಯಮಗಳನ್ನು ಪಾಲಿಸುತ್ತೇನೆ, ಸಾರ್ವಜನಿಕ ಆಸ್ತಿ–ಪಾಸ್ತಿಗಳನ್ನು ರಕ್ಷಿಸುತ್ತೇನೆ ಹಾಗೂ ವಿವಿಧ ಪಾಲನೆಗಳನ್ನೊಳಗೊಂಡ ಪ್ರತಿಜ್ಞಾ ವಿಧಿ ಕೈಗೊಳ್ಳಲಾಯಿತು ಮತ್ತು ಸಹಿ ಸಂಗ್ರಹ ಅಭಿಯಾನ ಮೂಲಕ ಗಣ್ಯರು ಸಹಿ ಹಾಕಿದರು.

## ವಿಶ್ವ ಪಾರ್ಶ್ವವಾಯು ದಿನ–2025

**ಗದಗ:** ಜಿಲ್ಲಾ ಆಡಳಿತ ಗದಗ, ಜಿಲ್ಲಾ ಪಂಚಾಯತ್ ಗದಗ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಗದಗ. ಕರ್ನಾಟಕ ಮೇದುಳು ಆರೋಗ್ಯ ಉಪಕ್ರಮ ವಿಭಾಗ, ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಮುಖ್ಯಸ್ಥರು ಜನರಲ್ ಮೆಡಿಸಿನ್ ಡಾ. ಸಂಗಮೇಶ ಅಸೂಟಿ ಅಧ್ಯಕ್ಷತೆಯಲ್ಲಿ ಅ.30 ಶುಕ್ರವಾರ ವಿಶ್ವ ಪಾರ್ಶ್ವವಾಯು ದಿನ–2025 ಅಂಗವಾಗಿ ಕಾರ್ಯಕ್ರಮ ಜರುಗಿತು,

ಜಿಲ್ಲಾ ಕುಷ್ಠರೋಗ ನಿರ್ಮೂಲನ ಅಧಿಕಾರಿ ಡಾ.ರಾಜೇಂದ್ರ. ಸಿ.ಬಸರಿಗಿಡದ ಹಾಗೂ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಕಾರ್ಯಕ್ರಮದ ಅನುಷ್ಠಾನ ಅಧಿಕಾರಿ ಇವರು ಉದ್ಘಾಟಿಸಿ ಮಾತನಾಡಿ ಎಲ್ಲರಿಗೂ ವಿಶ್ವ ಪಾರ್ಶ್ವವಾಯು ದಿನ–2025 ಶುಭಾಶಯಗಳನ್ನು ತಿಳಿಸಿ ಇತ್ತಿಚಿನ ದಿನಗಳಲ್ಲಿ ಪಾರ್ಶ್ವವಾಯು ಸಮಸ್ಯೆ ಸಮಾಜದಲ್ಲಿ ಹೆಚ್ಚಾಗುತ್ತಿದ್ದು ಪಾರ್ಶ್ವವಾಯುದಿಂದ ಕುಟುಂಬ/ಸಮಾಜ ಆರ್ಥಿಕವಾಗಿ ಸಾಮಾಜಿಕವಾಗಿ ಹಿಂದೆ ಉಳಿಯುತ್ತಿದೆ ಕಾರಣ ಪಾರ್ಶ್ವವಾಯುವಿನ ಲಕ್ಷಣಗಳನ್ನು ಬೇಗನೆ ಗುರ್ತಿಸಿ ಚಿಕಿತ್ಸೆ ಪಡೆಯುವಿಕೆ ಹಾಗೂ ತಡೆಗಟ್ಟುವುದು ಅತ್ಯವಶ್ಯಕವಾಗಿದೆ ಎಂದು ತಿಳಿಸಿದರು ಪಾರ್ಶ್ವವಾಯು ಬಾಧಿತ ರೋಗಿಗಳು ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಕಾರ್ಯಕ್ರಮದ ಉಪಯೋಗ ತೆಗೆದುಕೊಳ್ಳಲು ತಿಳಿಸಿದರು. ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ, ಹೊಸ ಕಟ್ಟಡ ಕೊಠಡಿ ಸಂಖ್ಯೆ:105ರಲ್ಲಿ ಪ್ರತಿನಿತ್ಯ




ಮೆದುಳು ಆರೋಗ್ಯ ಕ್ಲಿನಿಕ್‌ಗೆ ಭೇಟಿ ನೀಡಿ ಚಿಕಿತ್ಸೆ ಮನೋಸಾಮಾಜಿಕ ಬೆಂಬಲ ಫಿಜಿಯೋಥೆರಪಿ ಹಾಗೂ ಸ್ಪೀಚ್ ಥೆರಪಿ ಸೌಲಭ್ಯವನ್ನು ಪಡೆದು ಪಾರ್ಶ್ವವಾಯುವಿನಿಂದ ಗುಣಮುಖವಾಗಲು ತಿಳಿಸಿದರು ಹಾಗೂ ನಿಮಾನ್ಸಿಂದ ನುರಿತ ತಜ್ಞ ವೈದ್ಯರಿಂದ ಟೆಲಿ–ನ್ಯೂರೊಲಾಜಿ ಮೂಲಕ ಸೇವೆಯನ್ನು ಪಡೆದುಕೊಳ್ಳಲು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಡಾ.ಅರುಣಕುಮಾರ ಅಸಂಕ್ರಾಮಿಕ ರೋಗಗಳ ವಿಭಾಗದ ಮುಖ್ಯಸ್ಥರು, ಕೆ.ಎಚ್.ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ ಇವರು ಮಾತನಾಡಿ ವಿಶ್ವ ಪಾರ್ಶ್ವವಾಯು ದಿನ–2025?ರ ಘೋಷವಾಕ್ಯ ಪ್ರತಿ ನಿಮಿಷವು ಮುಖ್ಯ ಎಂಬುದರ ಕುರಿತು ಮಾತನಾಡಿ ರೋಗಿಗಳಿಗೆ ಒಂದು ನೀಮಿಷವು ಸಹ ಬಂಗಾರದಂತಹ ಸಮಯವಾಗಿದ್ದು ಸಮಯವನ್ನು ಕಳೆಯದೆ ಚಿಕಿತ್ಸೆಗೆ ತುರ್ತಾಗಿ ಸ್ಪಂದಿಸುವುದು ಅತೀ ಅವಶ್ಯಕ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಶ್ವಾಸಕೋಶ ತಜ್ಞರು ಡಾ.ಇರ್ಫಾನ್ ಎಮ್ ಮಾತನಾಡಿ ಸಮಾಜದಲ್ಲಿ ಮೂಡ ನಂಬಿಕೆಗಳಿಂದ ಆಚರಣೆಯಲ್ಲಿರುವ ವಿವಿಧ ಚಿಕಿತ್ಸೆಗೆ ಒಳಗಾಗಿ ರೋಗವನ್ನು ಹೆಚ್ಚು ಮಾಡಿಕೊಳ್ಳದೆ ತಜ್ಞ ವೈದ್ಯರನ್ನು ಭೇಟಿ ಮಾಡಿ ಸರಿಯಾದ ಸಮಯಕ್ಕೆ ಸರಿಯಾದ ಚಿಕಿತ್ಸೆಯನ್ನು ಪಡೆದುಕೊಂಡು ಪಾರ್ಶ್ವವಾಯುವಿನಿಂದ ಮುಕ್ತರಾಗಲು ತಿಳಿಸಿದರು.

ರೋಣದ ಜಿಲ್ಲಾ ಸಂಯೋಜಕರು ಕಭೀ ಪ್ರವೀಣ ಎಸ್ ನಿರೂಪಿಸಿದರು, ಶೂಶ್ರೂಷಕರು ಕಭಿ ಕಾರ್ಯಕ್ರಮ ರವಿ ನಂದ್ಯಾಳ ಸ್ವಾಗತಿಸಿದರು, ಕ್ಲಿನಿಕಲ್ ಸೈಕೋಲಾಜಿಸ್ಟ್ ರೇವಣಸಿದ್ದಪ್ಪ ವಂದನಾರ್ಪಣೆ ನೆರವೇರಿಸಿದರು.

ಈ ಸಂದರ್ಬಧದಲ್ಲಿ ಎನ್.ಟಿ.ಸಿ.ಪಿ ಕಾರ್ಯಕ್ರಮದ ಆಪ್ತ ಸಮಾಲೋಚಕರಾದ ಶ್ರೀಮತಿ ರೇಷ್ಮಾ ನಧಾಫ್. ಎನ್.ಸಿ.ಡಿ ವಿಭಾಗದ ಹಾಗೂ ಬಿ.ಎಸ್.ಸಿ ನರ್ಸಿಂಗ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮಿನಿ ಒಲಿಂಪಿಕ್ ಟೈಕ್ವಾಂಡೊ ಕರಾಟೆ ಸ್ಪರ್ಧೆಗೆ ಹಾಸನದ ಬಿ.ವಿ.ಆರ್ಯನ್ ಆಯ್ಕೆ

ಹಾಸನ: ದಿನಾಂಕ–4–11–2025ರಿಂದ–6–11–2025ರ ವರೆಗೆ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿರುವ 4ನೇ ಮಿನಿ ಒಲಿಂಪಿಕ್ ರಾಜ್ಯ ಮಟ್ಟದ ಟೈಕ್ವಾಂಡೊ ಕರಾಟೆ ಸ್ಪರ್ಧೆಗೆ, ಯುನೈಟೆಡ್ ಅಕಾಡೆಮಿ ಶಾಲೆಯ ವಿದ್ಯಾರ್ಥಿ, ಹಾಗೂ ವೈಚಾರಿಕ ಪತ್ರಿಕೆ ಸಂಪಾದಕರಾದ ವೆಂಕಟೇಶ್ ಬ್ಯಾಕರವಳ್ಳಿ ಅವರ ಪುತ್ರ ಬಿ.ವಿ.ಆರ್ಯನ್ ರವರು ಒಬ್ಬ ರೆ ಹಾಸನ ಜಿಲ್ಲೆ ಯಿಂದ ಪಪ್ರಥಮ ವಾಗಿ ಆಯ್ಕೆಯಾಗಿ, ಭಾಗವಹಿಸಲಿದ್ದಾರೆ.



ಇವರು ಹಾಸನ ಜಿಲ್ಲಾ ಅಮೆಚೂರ್ ಬಾಡಿ ಬಿಲ್ಡರ್ ಸಂಸ್ಥೆ ಯ ಕರಾಟೆ ತರಬೇತಿ ಶಾಲೆಯಲ್ಲಿ ಕರಾಟೆ ತರಬೇತಿ ದಾರರಾದ ಎಸ್ ಮಹದೇವರವರಲ್ಲಿ, ತರಬೇತಿ ಪಡೆಯುತ್ತಿದ್ದಾರೆ.

## ಮಾಜಿ ಸೈನಿಕರ ಕುಂದು ಕೊರತೆ ನಿವಾರಣೆ ಸಭೆ

**ಬಳ್ಳಾರಿ:** ಬೆಳಗಾವಿ ನಗರದ ಮರಾಠಾ ಲೈಟ ಇನಫಂಟ್ರಿ, ಶಿವಾಜಿ ಸ್ಟೇಡಿಯಂನಲ್ಲಿ ಡಿ.07 ರಂದು ಬೆಳಿಗ್ಗೆ 06 ರಿಂದ ಸಂಜೆ 06 ಗಂಟೆವರೆಗೆ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರುಗಳ ಕುಂದು ಕೊರತೆ ನಿವಾರಣಾ ಶಿಬಿರ ಏರ್ಪಡಿಸಲಾಗಿದೆ.

ಶಿಬಿರದಲ್ಲಿ ಮಾಜಿ ಸೈನಿಕರ ನಿವೃತ್ತಿ ಪಿಂಚಣಿ, ಕುಟುಂಬ ಪಿಂಚಣಿ, ಸ್ಪರ್ಶ ಹಾಗೂ ಇಸಿಎಚ್‌ಎಸ್ ಸಂಬಂಧಿಸಿದ ಸಮಸ್ಯೆಗಳು ಕುರಿತು ಸೂಕ್ತ ಪರಿಹಾರ ಕ್ರಮ ಕೈಗೊಳ್ಳಲಾಗುವುದು.

ಶಿಬಿರದಲ್ಲಿ ಪಾಲ್ಗೊಳ್ಳುವ ಫಲಾನುಭವಿಗಳು ತಮ್ಮ ಸಮಸ್ಯೆ ಕುರಿತು ಹೆಸರುಗಳನ್ನು ನೊಂದಾಯಿಸಿಕೊಂಡು, ನೋಂದಣಿ ಸಂಖ್ಯೆಯನ್ನು ಪಡೆಯಬೇಕಾಗಿರುತ್ತದೆ. ನೊಂದಣಿ ಮಾಡಲು ಬಯಸುವವರು ತಮ್ಮ ಕುಂದು ಕೊರತೆಗಳ ಅರ್ಜಿ ಮತ್ತು ಅದಕ್ಕೆ ಸಂಭಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584 ಅಥವಾ greatgorill@nic.in ಮೂಲಕ ಅಪ್‌ಲೋಡ್ ಮಾಡಬಹುದು.

ಶಿಬಿರದಲ್ಲಿ ಬೆಳಗಾವಿ ಜಿಲ್ಲೆ ಮತ್ತು ಧಾರವಾಡ, ಹಾವೇರಿ, ಗದಗ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗೆ ಸಂಬಂಧಿಸಿದ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರುಗಳು ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ.

ಅರ್ಜಿ ಮತ್ತು ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584 ಗೆ ಅಪ್‌ಲೋಡ್ ಮಾಡಿದ ವಿವರವನ್ನು ತಿಳಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ದೂ.0836–2440176 ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕ ಅವರು ತಿಳಿಸಿದ್ದಾರೆ.

# ಮಹಿಳೆಯರ ಮೇಲೆ ದೌರ್ಜನ್ಯ: 'ಕಿಲ್ಲರ್ ಕಾಂಗ್ರೆಸ್' ಪೋಸ್ಟರ್ ಅಭಿಯಾನ ಪ್ರಾರಂಭಿಸಿದ ಬಿಜೆಪಿ




**ಬೆಂಗಳೂರು:** ಆಡಳಿತಾರೂಢ ಕಾಂಗ್ರೆಸ್ ನೀತಿಗಳು ಕರ್ನಾಟಕವನ್ನು ಮಹಿಳೆಯರಿಗೆ ಸುರಕ್ಷಿತವಲ್ಲದ ಸ್ಥಳವನ್ನಾಗಿ ಮಾಡಿವೆ ಎಂದು ಆರೋಪಿಸಿ ವಿರೋಧ ಪಕ್ಷವಾದ ಬಿಜೆಪಿ ಶುಕ್ರವಾರ 'ಕಿಲ್ಲರ್ ಕಾಂಗ್ರೆಸ್' ಪೋಸ್ಟರ್ ಅಭಿಯಾನವನ್ನು ಪ್ರಾರಂಭಿಸಿತು.

ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಬಿಜೆಪಿ ಮಹಿಳಾ ಸದಸ್ಯರೊಂದಿಗೆ ಇಲ್ಲಿ ಅಭಿಯಾನವನ್ನು ಪ್ರಾರಂಭಿಸಿದರು.

ಪೋಸ್ಟರ್‌ನಲ್ಲಿ ಕಾಂಗ್ರೆಸ್ ಚಿಹ್ನೆಯ ಮುಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಗೃಹ ಸಚಿವ ಜಿ ಪರಮೇಶ್ವರ ಅವರ ಛಾಯಾಚಿತ್ರಗಳಿದ್ದು, ಹಸ್ತವು ರಕ್ತಸಿಕ್ತವಾಗಿರುವಂತೆ ತೋರಿಸಲಾಗಿದೆ.

ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಶೋಭಾ ಕರಂದ್ಲಾಜೆ, 'ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ರಾಜ್ಯದಲ್ಲಿ ಮಹಿಳೆಯರ ಮೇಲಿನ 1,800ಕ್ಕೂ ಹೆಚ್ಚು ದೌರ್ಜನ್ಯ ಪ್ರಕರಣಗಳು ವರದಿಯಾಗಿವೆ ಎಂದರು.

ಅನೇಕ ಶಾಲಾ ಬಾಲಕಿಯರು ಕಣ್ಮರೆಯಾಗುತ್ತಿದ್ದಾರೆ ಮತ್ತು ಮನೆಗೆ ಹಿಂತಿರುಗುತ್ತಿಲ್ಲ. ಹುಬ್ಬಳ್ಳಿಯ ಕಾಲೇಜು ಆವರಣದಲ್ಲಿ ಒಬ್ಬ ವಿದ್ಯಾರ್ಥಿನಿಯನ್ನು ಕೊಲ್ಲಲಾಯಿತು ಮತ್ತು ಬೆಳಗಾವಿಯಲ್ಲಿ ವಿಧಾನಸಭಾ ಅಧಿವೇಶನ ನಡೆಯುತ್ತಿರುವಾಗ ಮಹಿಳೆಯನ್ನು ವಿವಸ್ತ್ರಗೊಳಿ ಸಲಾಯಿತು. ಬೆಂಗಳೂರಿನ ಅಧ್ಯಾಪಕರೊಬ್ಬರು ಮೂಡ ಬಿದ್ರಿಯ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಸಚಿವರು ಆರೋಪಿಸಿದರು.

ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷೆ ವಿಜಯ ಕಿಶೋರ್ ರಹತ್ಕರ್ ಅವರಿಗೆ ಸದ್ಯದ ಪರಿಸ್ಥಿತಿಯ ಬಗ್ಗೆ ತಿಳಿಸಿದ್ದೇವೆ ಮತ್ತು ರಾಜ್ಯದಲ್ಲಿ ಮಹಿಳೆಯರ ಸುರಕ್ಷತೆಯನ್ನು ಪರಿಶೀಲಿಸುವಂತೆ ವಿನಂತಿಸಿದ್ದೇವೆ. ರಹತ್ಕರ್ ಅವರು ಎರಡು ವಾರಗಳ ಹಿಂದೆ ಕರ್ನಾಟಕಕ್ಕೆ ಭೇಟಿ ನೀಡಿದ್ದಾಗ, ನಾವು ಅವರಿಗೆ ಮಹಿಳಾ ಸುರಕ್ಷತೆಯ ಬಗ್ಗೆ ತಿಳಿಸಿದ್ದೆವು' ಎಂದು ಕರಂದ್ಲಾಜೆ ಹೇಳಿದರು.

# ರೇಣುಕಾಸ್ವಾಮಿ ಹತ್ಯೆ ಪ್ರಕರಣ: ದೋಷಾರೋಪ ನಿಗದಿ ನ.3ಕ್ಕೆ ಮುಂದೂಡಿಕೆ

**ಬೆಂಗಳೂರು:** ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಆರೋಪಿಗಳಾದ ನಟ ದರ್ಶನ್, ಪವಿತ್ರಾ ಗೌಡ ಸೇರಿದಂತೆ ಇತರ ಆರೋಪಿಗಳ ದೋಷಾರೋಪ ನಿಗದಿ ನವೆಂಬರ್ 3ಕ್ಕೆ ಮುಂದೂಡಲ್ಪಟ್ಟಿದೆ.

ಇಂದು ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ನಟ ದರ್ಶನ್, ಪವಿತ್ರಾ ಗೌಡ ಸೇರಿ 6 ಮಂದಿ ಆರೋಪಿಗಳು ಜೈಲಿನಿಂದಲೇ ಬೆಂಗಳೂರಿನ 57ನೇ ಸಿಸಿಎಚ್ ಕೋರ್ಟ್‌ನಲ್ಲಿ ವಿಡಿಯೋ ಕಾನ್ಪರೆನ್ಸ್ ಮೂಲಕ ವಿಚಾರಣೆಗೆ ಹಾಜರಾಗಿದ್ದರು. ನಿಗದಿಯಂತೆ ಎಲ್ಲಾ ಆರೋಪಿಗಳ ದೋಷಾರೋಪ ಇಂದು ನಿಗದಿಯಾಗಬೇಕಾಗಿತ್ತು. ಕೋರ್ಟ್ ಜಡ್ಜ್ ಇಂದೇ ಆರೋಪಿಗಳ ವಿರುದ್ಧ ದೋಷಾರೋಪ ಹೊರಿಸುವುದಾಗಿ ಹೇಳಿದ್ದರು.ಆದರೆ, ನಟ ದರ್ಶನ್ ಪರ ವಕೀಲ ಸುನೀಲ್ ಕುಮಾರ್ ಸ್ವಲ್ಪ ಕಾಲಾವಕಾಶ ನೀಡುವಂತೆ ಮನವಿ ಮಾಡಿದ್ದರು. ಜೈಲಿಗೆ ಹೋಗಿ ಆರೋಪಿ ದರ್ಶನ್ ಅವರೊಂದಿಗೆ ಚರ್ಚೆ ಮಾಡಿ ಅವರು ಖುದ್ದಾಗಿ ಕೋರ್ಟ್ ಗೆ ಹಾಜರುಪಡಿಸಲು ಮತ್ತೊಂದು ದಿನಾಂಕ ನೀಡಿ ಎಂದು ಮನವಿ ಮಾಡಿಕೊಂಡರು. ಇದರಿಂದಾಗಿ ನವಂಬರ್ 3 ರಂದು ಆರೋಪಿಗಳ ವಿರುದ್ಧ ದೋಷಾರೋಪ ಹೊರಿಸುವುದಾಗಿ ನ್ಯಾಯಾಧೀಶರು ಹೇಳಿದರು.ನವಂಬರ್ 3 ರಂದು ಜೈಲಿನಿಂದ ಹೊರಗೆ ಜಾಮೀನಿನ ಮೇಲೆ ಇರುವ ಆರೋಪಿಗಳು ಕೂಡ ಕಡ್ಡಾಯವಾಗಿ ಖುದ್ದಾಗಿ ಕೋರ್ಟ್ ವಿಚಾರಣೆಗೆ

# ದೇವನಹಳ್ಳಿಯಲ್ಲಿ ಒಂದೇ ಕುಟುಂಬದ ನಾಲ್ವರು ಆತ್ಮಹತ್ಯೆಗೆ ಯತ್ನ: ಇಬ್ಬರು ಸಾವು, ಇನ್ನಿಬ್ಬರ ಸ್ಥಿತಿ ಚಿಂತಾಜನಕ



ಪೊಲೀಸರಿಂದ ಮನೆಯಲ್ಲಿ ಪರಿಶೀಲನೆ.

**ದೇವನಹಳ್ಳಿ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಹೆಗ್ಗನಹಳ್ಳಿಯಲ್ಲಿ ಒಂದೇ ಕುಟುಂಬದ ನಾಲ್ವರು ಆತ್ಮಹತ್ಯೆಗೆ ಯತ್ನಿಸಿ ಇಬ್ಬರು ಮೃತಪಟ್ಟ ಮನಕಲಕುವ ಘಟನೆ ನಡೆದಿದೆ.

ಜೀವನೋಪಾಯಕ್ಕೆ ಪೌರೋಹಿತ್ಯ ಮಾಡಿಕೊಂಡಿದ್ದ ಬ್ರಾಹ್ಮಣ ಸಮುದಾಯದ ಕುಮಾರಪ್ಪ ಎಂಬವರ ಕುಟುಂಬ ದಾರುಣ ಅಂತ್ಯ ಕಂಡಿದ್ದು, ಇಡೀ ಗ್ರಾಮವೇ ಶೋಕಸಾಗರದಲ್ಲಿ ಮುಳುಗಿದೆ. ಘಟನೆಯಲ್ಲಿ ಇಬ್ಬರು ಮೃತಪಟ್ಟಿದ್ದು, ಇನ್ನಿಬ್ಬರ ಸ್ಥಿತಿ ಗಂಭೀರವಾಗಿದೆ.

**ಆಗಿದ್ದೇನು?:** 60 ವರ್ಷ ವಯಸ್ಸಿನ ಕುಮಾರಪ್ಪ, ಅವರ ಪತ್ನಿ 55 ವರ್ಷದ ರಮಾ ಮತ್ತು ಗಂಡು ಮಕ್ಕಳಾದ ಅಕ್ಷಯ್ ಹಾಗೂ ಅರುಣ್ ನಿನ್ನೆ ಸಾಮೂಹಿಕವಾಗಿ ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಈ ಪೈಕಿ ಹಿರಿಯ ಮಗ ಕ್ರೀಮಿನಾಶಕ ಸೇವಿಸಿ ನಂತರ ನೇಣಿಗೆ ಶರಣಾಗಿದ್ದಾನೆ.

ತಂದೆ ಕುಮಾರಪ್ಪ ಹಾಗೂ ಹಿರಿಯ ಮಗ ಅರುಣ್ ಮೃತಪಟ್ಟಿದ್ದಾರೆ. ಅರಚಾಡುತ್ತಾ ವಿಲವಿಲ ಒದ್ದಾಡುತ್ತಿದ್ದ ತಾಯಿ ರಮಾ ಹಾಗೂ ಕಿರಿಯ ಮಗನನ್ನು ಸ್ಥಳೀಯರು ಅಂಬುಲೆನ್ಸ್‌ನಲ್ಲಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಇಬ್ಬರ ಸ್ಥಿತಿಯೂ ಗಂಭೀರವಾಗಿದೆ.

# ಇಂದಿರಾಗಾಂಧಿ–ಸರ್ದಾರ್ ವಲ್ಲಭಬಾಯಿ ಪಟೇಲರ ಸ್ಮರಣೆ ಮಾಡುವ ಮೂಲಕ ಅವರ ಆಶಯ ಈಡೇರಿಸಿ: ದೇವರಾಜ್

**ಚಿಕ್ಕಮಗಳೂರು:** ಉಕ್ಕಿನ ಮಹಿಳೆ ಮಾಜಿ ಪ್ರಧಾನಿ ಇಂದಿರಾಗಾಂಧಿಯವರ ಮತ್ತು ಮಾಜಿ ಉಪ ಪ್ರಧಾನಿ ಸರ್ದಾರ್ ವಲ್ಲಭಬಾಯಿ ಪಟೇಲ್ ಇವರುಗಳ ಸ್ಮರಣೆಯನ್ನು ಮಾಡುವ ಮೂಲಕ ಅವರ ಆಶಯಗಳನ್ನು ಈಡೇರಿಸಲು ಪ್ರತಿಯೊಬ್ಬರೂ ಪಣತೊಡಬೇಕೆಂದು ಕೆಪಿಸಿಸಿ ವಕ್ತಾರ ಹೆಚ್.ಹೆಚ್.ದೇವರಾಜ್ ಕರೆನೀಡಿದರು.

ಅವರು ನಗರದ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಜಿಲ್ಲಾ ಕಾಂಗ್ರೆಸ್ ಹಾಗೂ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಆಯೋಜಿಸಿದ್ದ ಮಾಜಿ ಪ್ರಧಾನಮಂತ್ರಿ ದಿವಂಗತ ಇಂದಿರಾಗಾಂಧಿಯವರ ಪುಣ್ಯಸ್ಮರಣೆ ಹಾಗೂ ಸರ್ದಾರ್ ವಲ್ಲಭಬಾಯಿ ಪಟೇಲರ 150 ನೇ ಜನ್ಮ ದಿನಾಚರಣೆಯಲ್ಲಿ ಮಾತನಾಡಿದರು.

ಇಂದಿರಾಗಾಂಧಿಯವರು ಕೈಗೊಂಡ ದಿಟ್ಟ ನಿರ್ಧಾರ ಹಾಗೂ ಹೋರಾಟಗಳಿಂದ ದೇಶದಲ್ಲಿ ಹಲವಾರು ಕ್ರಾಂತಿಕಾರಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ಅವುಗಳನ್ನು ಮುನ್ನೆಡೆಸಿಕೊಂಡು ಹೋಗಲು ಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಧ್ಯ ಎಂದು ಹೇಳಿದರು. ಇಂದಿರಾಗಾಂಧಿಯವರು ಅಂದು ಜಾರಿಗೆ ತಂದ 21 ಅಂಶಗಳ ಕಾರ್ಯಕ್ರಮಗಳು ಪ್ರಸ್ತುತವಾಗಿ ಕಾರ್ಯನಿರ್ವಹಿಸುತ್ತಿವೆ. ಉಳುವವನೆ ಭೂ ಒಡೆಯ ಕಾರ್ಯಕ್ರಮ ಜನಮಾನಸದಲ್ಲಿ ಅಚ್ಚಳಿಯದೆ ಉಳಿದಿದೆ ಎಂದರು.

# ಸರ್ದಾರ್ ವಲ್ಲಭಬಾಯಿ ಪಟೇಲ್ ದೇಶದ ಏಕತೆಗೆ ಕಾರಣಕರ್ತರು: ಡಾ.ವಿಕ್ರಮ್ ಅಮಟೆ

**ಚಿಕ್ಕಮಗಳೂರು, ಅ.31:** ಭಾರತದ ಉಕ್ಕಿನ ಮನುಷ್ಯ ಎಂದೇ ಪ್ರಖ್ಯಾತಿ ಪಡೆದ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರು ದೇಶದ ಏಕತೆಗೆ ಕಾರಣಕರ್ತರಾಗಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ ವಿಕ್ರಮ್ ಅಮಟೆ ಹೇಳಿದರು.

ಜಿಲ್ಲಾ ಪೊಲೀಸ್ ಇಲಾಖೆಯಿಂದ ಇಂದು ನಗರದ ಜಿಲ್ಲಾ ಪೊಲೀಸ್ ಕಚೇರಿ ಮುಂಭಾಗದ ಸರ್ಕಲ್ ಬಳಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ 150ನೇ ಜನ್ಮದಿನ–ರಾಷ್ಟ್ರೀಯ ಏಕತಾ ದಿನಾಚರಣೆಯಲ್ಲಿ ಅವರು ಮಾತನಾಡಿದರು.



ಭಾರತದ ಏಕೀಕರಣಕ್ಕೆ ಅವರು ನೀಡಿರುವ ಕೊಡುಗೆಯನ್ನು ಪರಿಗಣಿಸಿ ಅವರನ್ನು 'ಭಾರತದ ಏಕೀಕರಣದ ರೂವಾರಿ' ಎಂದು ಕರೆಯಲಾಗುತ್ತದೆ. ಅವರಲ್ಲಿನ ದೇಶಪ್ರೇಮ ಮಾದರಿಯಾಗಿದೆ ಎಂದರು.

ರಾಷ್ಟ್ರದ ಏಕತೆ ಮತ್ತು ಸಾರ್ವಭೌಮತೆಯನ್ನು ಕಾಪಾಡಿದ ಹಾಗೂ ಅವುಗಳನ್ನು ತಮ್ಮ ಕಾರ್ಯಗಳ ಮೂಲಕವೇ ಎತ್ತಿ ಹಿಡಿದ ದೇಶದ ಮೊದಲ ಉಪಪ್ರಧಾನಿ ಹಾಗೂ ಗೃಹ ಸಚಿವ ಸರ್ದಾರ್ ವಲ್ಲಭಬಾಯಿ ಪಟೇಲರ ಜೀವನ ಮತ್ತು ಆದರ್ಶಗಳು ಈ ಕಾಲಕ್ಕೂ ಪ್ರಸ್ತುತ ಮತ್ತು ಅನುಕರಣೀಯ. ಸ್ವಾತಂತ್ರ್ಯಾನಂತರ ಹರಿದು ಹಂಚಿಹೋಗಿದ್ದ ಸಂಸ್ಥಾನಗಳನ್ನು ಭಾರತದ ಒಕ್ಕೂಟದಲ್ಲಿ ಸೇರಿಸಿ ಒಗ್ಗೂಡಿಸುವಲ್ಲಿ ಮಹತ್ವದ ಪಾತ್ರ ವಹಿಸಿದವರು ಸರ್ದಾರ್ ವಲ್ಲಭಭಾಯಿ ಪಟೇಲ್. ಅದು ಸುಲಭದ ಕೆಲಸವಾಗಿರಲಿಲ್ಲ. ಸಂಸ್ಥಾನಗಳ ರಾಜಮಹಾರಾಜರೊಂದಿಗೆ ಮಾತುಕತೆ ನಡೆಸುವ ಹೊಣೆಗಾರಿಕೆಯನ್ನು ಪ್ರಧಾನಿ ಜವಾಹರಲಾಲ್ ನೆಹರು ಅವರು ಪಟೇಲ್ ಹಾಗೂ ಭಾರತದ ಕೊನೆಯ ವೈಸರಾಯ್ ಮೌಂಟ್ ಬ್ಯಾಟನ್‌ರ ರಾಜಕೀಯ ಸಲಹೆಗಾರ ವಿ.ಪಿ.ಮೆನನ್ ಅವರಿಗೆ ವಹಿಸಿದರು. ಪರಿಣಾಮಕಾರಿ ಕಾರ್ಯತಂತ್ರ ಮತ್ತು ದೂರದೃಷ್ಟಿಯೊಂದಿಗೆ ಈ ಕೆಲಸಕ್ಕೆ ಅಣಿಯಾದ ಪಟೇಲರು ತಮ್ಮ ಜಾಣ್ಮೆ ಮತ್ತು ಕಠಿಣ ನಿಲುವುಗಳಿಂದಲೇ ಅನೇಕ ಜಟಿಲ ಪರಿಸ್ಥಿತಿಗಳನ್ನು ತಿಳಿಗೊಳಿಸಿದರು ಎಂದರು.

ಗುಜರಾತಿನ ಏಕಥಾನ್ ಎಂಬ ನಗರದಲ್ಲಿ ಇಂದು ಪ್ರಧಾನ ಮಂತ್ರಿಯವರು ರಾಷ್ಟ್ರೀಯ ಏಕತಾ ದಿನವನ್ನು ಆಚರಿಸುತ್ತಾರೆ ಹಾಗೂ ಬೃಹತ್ ಮಟ್ಟದಲ್ಲಿ ಪೊಲೀಸ್ ಪೆರೇಡ್ ನಡೆಯುತ್ತದೆ ಎಂದು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಅನಂತರ ತಾಲ್ಲೂಕು ಕಚೇರಿಯವರೆಗೆ ನಡೆದ ಮ್ಯಾರಥಾನ್‌ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಪೌರಾಯುಕ್ತ ಬಿ.ಸಿ.ಬಸವರಾಜ್ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸಿ.ಟಿ.ಜಯಕುಮಾರ್, ಉಪಾಧೀಕ್ಷಕ ಶೈಲೇಂದ್ರ, ಪೊಲೀಸ್ ಮತ್ತಿತರ ಇಲಾಖೆಯ ಅಧಿಕಾರಿಗಳು, ವಿದ್ಯಾರ್ಥಿಗಳು, ಮತ್ತಿತರರು ಇದ್ದರು.




Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**